ಸಂಪುಟ : 11 ಸಂಚಿಕೆ: 34 ಪುಟ : 4+2 ಬೆಲೆ: 3.00 ಗುರುವಾರ ಮಾರ್ಚ್ 05 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 34 Pages : 4+2 Price : 3.00 Thursday March 05 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ ಪತ್ರಕರ್ತೆಯರಿಗಾಗಿ ವಿಶೇಷ ತರಬೇತಿ - ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಮಾಧ್ಯಮ ಅಕಾಡೆಮಿಯು Infosys Springboard ಸಿ.ಎಸ್.ಆರ್ ಕಾರ್ಯಕ್ರಮದಡಿ ಮಹಿಳಾ ಪತ್ರಕರ್ತೆಯರಿಗಾಗಿ ವಿಶೇಷ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಿದ್ದು, ಅರ್ಹ ಪತ್ರಕರ್ತೆಯರಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಈ ತರಬೇತಿ ಕಾರ್ಯಕ್ರಮವು ಮಾರ್ಚ್ 25 ರಿಂದ 27ರವರೆಗೆ ಮೈಸೂರಿನ Infosys ಕ್ಯಾಂಪಸ್‌ನಲ್ಲಿ ನಡೆಯಲಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿ ಒಳಗೊಂಡಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು ಕನಿಷ್ಠ 5 ವರ್ಷಗಳ ಸೇವಾನುಭವ ಹೊಂದಿರುವ ಮಹಿಳಾ ಪತ್ರಕರ್ತೆಯರು ಅರ್ಜಿ ಸಲ್ಲಿಸಲು ಅರ್ಹರಾಗಿದ್ದಾರೆ.

ಆಸಕ್ತ ಪತ್ರಕರ್ತೆಯರು ಕೆಳಗಿನ ಗೂಗಲ್ ಫಾರ್ಮ್ ಮೂಲಕ ಅಗತ್ಯ ಮಾಹಿತಿ ಹಾಗೂ ದಾಖಲೆಗಳನ್ನು ಸಲ್ಲಿಸಿ ನೋಂದಾಯಿಸಬಹುದು: https://forms.gle/tozr4GxUQibDHBvk9

**ಅಗತ್ಯ ದಾಖಲೆಗಳು:** ಇತ್ತೀಚಿನ ಭಾವಚಿತ್ರ, ವಯಸ್ಸಿನ ದೃಢೀಕರಣ ದಾಖಲೆ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಯ ಮುಖ್ಯಸ್ಥರ ದೃಢೀಕರಣ ಪತ್ರ ಅಥವಾ ಅಧಿಕೃತ ಗುರುತಿನ ಚೀಟಿ, ಸಂಬಂಧಿತ ಮಾಧ್ಯಮ ಸಂಸ್ಥೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿ ಸೇರ್ಪಡೆಯಾಗಿರುವ ಕುರಿತು ದಾಖಲೆ, ಕನಿಷ್ಠ 5 ವರ್ಷಗಳ ಸೇವಾನುಭವದ ದಾಖಲೆ

**ತರಬೇತಿ ವೈಶಿಷ್ಟಗಳು:** ಮೂರು ದಿನಗಳ ವಸತಿಯುತ ತರಬೇತಿ, ನಿಯಮಾನುಸಾರ ಪ್ರಯಾಣ ಭತ್ಯೆ, ಡಿಜಿಟಲ್ ಮಾಧ್ಯಮ ತರಬೇತಿ, ಎಐ ಬಳಕೆ ಕುರಿತು ಮಾರ್ಗದರ್ಶನ, ಸಾಫ್ಟ್ ಸ್ಕಿಲ್ ಹಾಗೂ ನಾಯಕತ್ವ ಅಭಿವೃದ್ಧಿ ತರಬೇತಿ, ಪತ್ರಕರ್ತೆಯರ ಆಯ್ಕೆ ಕುರಿತು ಅಂತಿಮ ನಿರ್ಧಾರ ಅಕಾಡೆಮಿಯದ್ದಾಗಿರುತ್ತದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಮಾರ್ಚ್10 ರಂದು.

## ಗಿಡಗಳ ಟೊಂಗೆ ಕಟಾವಣೆ: ಆಕ್ಷೇಪಣೆ ಪ್ರಕಟಣೆ ಹಿಂದಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಶಾಖಾ ವ್ಯಾಪ್ತಿಯ ನಾಗಾವಿ ಕ್ರಾಸ್‌ನಿಂದ ಮುಳಗುಂದದ ಬಸಾಪೂರ ಕ್ರಾಸ್ ವರೆಗೆ ರಸ್ತೆಯ ಎಡಬದಿಯ 47 ಹಾಗೂ ಬಲಬದಿಯ 45 ಸೇರಿ ಒಟ್ಟು 92 ಗಿಡಗಳ ಟೊಂಗೆಗಳನ್ನು ಕಟಾವಣೆ ಮಾಡುವ ಕುರಿತು ಸಾರ್ವಜನಿಕರ ಗಮನಕ್ಕೆ ಪ್ರಕಟಣೆ ನೀಡಲಾಗಿತ್ತು.

ಈ ಹಿನ್ನೆಲೆಯಲ್ಲಿ ತಕರಾರು ಸಲ್ಲಿಸಬಯಸುವವರು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಗದಗ ಉಪವಿಭಾಗ, ಗದಗ ಹಾಗೂ ಮರ ಅಧಿಕಾರಿಯವರಿಗೆ ಬಿಂಕದಕಟ್ಟಿ ಕಚೇರಿಯಲ್ಲಿ ಲಿಖಿತ ರೂಪದಲ್ಲಿ ಮಾರ್ಚ್ 5 ರೊಳಗಾಗಿ ಸಲ್ಲಿಸಲು ಹಾಗೂ ಮಾರ್ಚ್ 6 ರಂದು ಬೆಳಿಗ್ಗೆ 10.30ರಿಂದ 12.30 ಗಂಟೆಯವರೆಗೆ ಸ್ಥಳದಲ್ಲೇ ಆಕ್ಷೇಪಣೆ ಸಲ್ಲಿಸಲು ಸೂಚಿಸಲಾಗಿತ್ತು.

ಆದರೆ ಕಾರಣಾಂತರಗಳಿಂದ ಗಿಡಗಳ ಟೊಂಗೆ ಕಟಾವಣೆ ಕುರಿತು ನೀಡಲಾಗಿದ್ದ ಆಕ್ಷೇಪಣೆ ಆಹ್ವಾನ ಪ್ರಕಟಣೆಯನ್ನು ಹಿಂಪಡೆಯಲಾಗಿದೆ ಎಂದು ಗದಗ ಉಪವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಿರಹಟ್ಟಿಯಲ್ಲಿ ಸಡಗರ-ಸಂಭ್ರಮದ, ಶಾಂತಿಯುತ ಹೋಳಿ ಹಬ್ಬ ಆಚರಣೆ

# ಪಟ್ಟಣದಾದ್ಯಂತ ಮುಗಿಲು ಮುಟ್ಟಿದ ಹಲಗೆ ನಾದ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಾ. 3ರ ಮಧ್ಯರಾತ್ರಿಯಿಂದ ಮಾ. 4ರ ಸಂಜೆಯವರೆಗೂ ಶಿರಹಟ್ಟಿ ಪಟ್ಟಣದಲ್ಲಿ ಹೋಳಿ ಹಬ್ಬದ ನಿಮಿತ್ತ ಬೃಹತ್ ಹುಲ್ಲುಗಾಮನ ಮೆರವಣಿಗೆ, ಕಾಮದಹನ ಮತ್ತು ಓಕುಳಿ ಹಬ್ಬವು ಸಡಗರ ಸಂಭ್ರಮದಿಂದ ಪೊಲೀಸ್ ಬಿಗಿ ಭದ್ರತೆಯಲ್ಲಿ ನಡೆಯಿತು.

ಸಂಪ್ರದಾಯದಂತೆ ಹೋಳಿ ಹುಣ್ಣಿಮೆಯ ದಿನವಾದ ಬುಧವಾರ ಮಧ್ಯರಾತ್ರಿ 11 ಗಂಟೆ ಸುಮಾರಿಗೆ ಕುಂಬಾರ ಓಣಿಯಲ್ಲಿ ಹುಲ್ಲಿನಿಂದ ತಯಾರಿಸಿದ ಬೃಹತ್ ಕಾಮನ ಮೂರ್ತಿಯನ್ನು ಸಕಲ ವೇಷ ಭೂಷಣಗಳೊಂದಿಗೆ ಸಿಂಗರಿಸಿ, ಅಲಂಕೃತ ಬಂಡಿ ಮಂಟಪದಲ್ಲಿ ಪ್ರತಿಷ್ಠಾಪಿಸಿ, ಹಸಿರು ತೋರಣಗಳಿಂದ ಸಿಂಗರಿಸಿ ಹಲಗೆಗಳ ಝೇಂಕಾರಗಳ ಮಧ್ಯೆ ಮಹರ್ಷಿ ವಾಲ್ಮೀಕಿ ವೃತ್ತದಿಂದ




ಚಾಲನೆ ನೀಡಲಾಯಿತು.

ಬಡಿಗೇರ ಓಣಿಯ ಮೂಲಕ, ಕೆಳಗೇರಿ ಓಣಿ, ಬಜಾರ ರಸ್ತೆ, ದರ್ಗಾ ರಸ್ತೆ, ಮಸ್ಜಿದ್ ಸೇರಿದಂತೆ ಪ್ರಮುಖ ವೃತ್ತಗಳಲ್ಲಿ ಸಂಚರಿಸಿ ಮಾ. 4ರ ಬೆಳಗಿನ ಜಾವ 9 ಗಂಟೆಗೆ ಮತ್ತೆ ಅದೇ ವೃತ್ತದಲ್ಲಿ ಕಾಮದಹನ ನಡೆಸಲಾಯಿತು.

ಮಂಗಳವಾರ ಮಧ್ಯ ರಾತ್ರಿಯಿಂದಲೇ ಪಟ್ಟಣದಾದ್ಯಂತ ಹಲಗೆಗಳ ಝೇಂಕಾರ ಮುಗಿಲು ಮುಟ್ಟುವಂತಿತ್ತು. ಕಾಮದಹನ ಮತ್ತು ಓಕುಳಿಯಲ್ಲಿ ಯುವಕರು ತಂಡೋಪತಂಡವಾಗಿ ಹಲಗೆಗಳನ್ನು ಬಾರಿಸುತ್ತಿದ್ದರು. ಯಾರು ಎಷ್ಟೇ ಹೇಳಿದರೂ ತಮಗೆ ಸಾಕಾಗುವವರೆಗೂ ಹಲಗೆಗಳನ್ನು ಬಾರಿಸುತ್ತಾ, ಕುಣಿದು ಕುಪ್ಪಳಿಸಿ, ಬಾಯಿ ಬಾಯಿ ಬಡಿದುಕೊಂಡು ಹಬ್ಬದಲ್ಲಿ ತಮ್ಮನ್ನೇ ತಾವು ಮರೆತಂತಿದ್ದರು. ಬುಧವಾರ ಓಕುಳಿ ಪ್ರಯುಕ್ತ ಓಣಿಗಳಲ್ಲಿ ಮಹಿಳೆಯರು, ಮಕ್ಕಳು ಸೇರಿದಂತೆ ಅನೇಕರು ತಮ್ಮ ಸ್ನೇಹಿತರೊಂದಿಗೆ, ಕುಟುಂಬದವರೊಂದಿಗೆ ಪರಸ್ಪರ ಬಣ್ಣ ಹಚ್ಚುವುದರ ಮೂಲಕ ಓಕುಳಿಯನ್ನು ಆಚರಿಸಿದರು. ಯುವಕರು ಅಣಕು ಶವಯಾತ್ರೆ ನಡೆಸಿ ವಿವಿಧ ಬಣ್ಣಗಳಲ್ಲಿ ಮಿಂದೆದ್ದರು. ಮುನ್ನೆಚ್ಚರಿಕಾ ಕ್ರಮವಾಗಿ ಡಿಎಸ್‌ಪಿಗಳಾದ ಮುರ್ತುಜಾ ಖಾದ್ರಿ, ವಿದ್ಯಾಧರ ನಾಯಕ ಪಟ್ಟಣದಲ್ಲಿಯೇ ಮೊಕ್ಕಾಂ ಹೂಡಿದ್ದರು. ಸ್ಥಳೀಯ ಸಿಪಿಐ ಬಿ.ವಿ. ನ್ಯಾಮಗೌಡ, ಪಿಎಸ್‌ಐ ಈರಪ್ಪ ರಿತ್ತಿ ಸೇರಿದಂತೆ ವಿವಿಧ ಕಡೆಗಳಿಂದ ಆಗಮಿಸಿದ್ದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಅಹೋರಾತ್ರಿ ಬಂದೋಬಸ್ತ್‌ನಲ್ಲಿದ್ದರು.

#### ಬಿಗಿ ಬಂದೋಬಸ್ತ್

ಹೋಳಿ ಹಬ್ಬದ ಮುನ್ನಾದಿನ ಪಟ್ಟಣಕ್ಕೆ ಎಸ್‌ಪಿ ರೋಹನ್ ಜಗದೀಶ ಭೇಟಿ ನೀಡಿ ಮೆರವಣಿಗೆ ಬಗ್ಗೆ ಮಾಹಿತಿಯನ್ನು ಪಡೆದುಕೊಂಡರು. ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಪಟ್ಟಣಕ್ಕೆ 2-ಡಿಎಸ್‌ಪಿ, 4-ಸಿಪಿಐ, 6-ಪಿಎಸ್‌ಐ, 6-ಎಎಸ್‌ಐ, 60-ಎಚ್‌ಸಿ, 60-ಹೋಮ್‌ಗಾರ್ಡ್ಸ್, 2-ಕೆಎಸ್‌ಆರ್‌ಪಿ ತುಕಡಿ, 2-ಡಿಎಆರ್ ತುಕಡಿ, ಬ್ಯಾರಿಕೇಡ್, ಆಯಕಟ್ಟಿನ ಸ್ಥಳಗಳಲ್ಲಿ ಸಿಸಿ ಕ್ಯಾಮರಾ, ಅಧಿಕಾರಿಗಳಿಗೆ ಬಾಡಿ ಕ್ಯಾಮರಾ, 20 ಹ್ಯಾಂಡಿ ಕ್ಯಾಮರಾ ಮತ್ತು ಡ್ರೋಣ್‌ಗಳ ಬಳಕೆ, ಸೋಶಿಯಲ್ ಮಿಡಿಯಾ ಮೇಲೆ ನಿಗಾದಂತಹ ಕಠಿಣ ಕ್ರಮ ಕೈಕೊಳ್ಳಲಾಗಿತ್ತು.

### ಯುವನಿಧಿ ಯೋಜನೆಯ ಕುರಿತ ಕಾರ್ಯಾಗಾರದಲ್ಲಿ ಬಿ.ಬಿ. ಅಸೂಟಿ

# ಕೌಶಲ್ಯಾಭಿವೃದ್ಧಿ ಬೆಳೆಸಿಕೊಳ್ಳಲು ಕಾರ್ಯಾಗಾರ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಯುವಕರು ಉದ್ಯೋಗ ತರಬೇತಿಯ ಜೊತೆಗೆ ಕೌಶಲ್ಯಾಭಿವೃದ್ಧಿ ಬೆಳೆಸಿಕೊಳ್ಳಲು ಸಹಕರಿಸುವುದು ಈ ಕಾರ್ಯಾಗಾರದ ಮುಖ್ಯ ಉದ್ದೇಶವಾಗಿದೆ ಎಂದು ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ತಿಳಿಸಿದರು.

ನಗರದ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಿಂದ ಹಮ್ಮಿಕೊಳ್ಳಲಾಗಿದ್ದ ಯುವನಿಧಿ ಯೋಜನೆಯ ಕುರಿತ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ 2023ರ ಚುನಾವಣೆ ಪೂರ್ವದಲ್ಲಿಯೇ 5 ಗ್ಯಾರಂಟಿಗಳನ್ನು ಉಚಿತವಾಗಿ ಕೊಡುವ ಕುರಿತು ಭರವಸೆ ನೀಡಿತ್ತು. ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಯು




ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯಾಗಿದೆ. ನಿರುದ್ಯೋಗಿ ಪದವೀಧರರಿಗೆ ತಿಂಗಳಿಗೆ 3000 ಮತ್ತು ಡಿಪ್ಲೋಮಾ ಹೊಂದಿರುವವರಿಗೆ 1,500 ಮಾಸಿಕ ಭತ್ಯೆಯನ್ನು ಗರಿಷ್ಠ 2 ವರ್ಷಗಳವರೆಗೆ ಅಥವಾ ಉದ್ಯೋಗ ಸಿಗುವವರೆಗೆ ಒದಗಿಸುತ್ತದೆ. ಯುವನಿಧಿ ಯೋಜನೆಯ ಸೌಲಭ್ಯವನ್ನು ಅರ್ಹ ಫಲಾನುಭವಿಗಳು ಸದುಪಯೋಗಪಡಿಸಿಕೊಳ್ಳಬೇಕು. ಉದ್ಯೋಗಕ್ಕೆ ಸಹಾಯಕವಾಗುವ ಕೌಶಲ್ಯತೆಯನ್ನು ಬೆಳೆಸಿಕೊಳ್ಳಬೇಕೆಂದು ತಿಳಿಸಿದರು.

ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಸಮಿತಿಯ ಸದಸ್ಯ ಕೃಷ್ಣಗೌಡ ಎಚ್. ಪಾಟೀಲ ಮಾತನಾಡಿ, ಯುವ ನಿಧಿ ಯೋಜನೆಯ ಕುರಿತು ಅರಿವು ಮೂಡಿಸುವುದು ಹಾಗೂ ಯೋಜನೆಯ ಸದ್ಬಳಕೆ ಮಾಡಿಕೊಳ್ಳುವುದು ಈ ಕಾರ್ಯಾಗಾರದ ಪ್ರಮುಖ ಉದ್ದೇಶವಾಗಿದೆ. ಯುವಕರಿಗೆ ಪದವಿ ಮುಗಿದ ನಂತರ ಉದ್ಯೋಗ ಸಿಗುವವರೆಗೆ ಆರ್ಥಿಕ ಸಹಾಯ ನೀಡುವ ಉದ್ದೇಶದಿಂದ ಯುವನಿಧಿ ಯೋಜನೆಯನ್ನು ಜಾರಿಗೆ ತಂದಿದೆ. ಯುವಕರು ಯೋಜನೆಯ ಈ ಹಣವನ್ನು ಪಾಕೆಟ್ ಮನಿ ಎಂದು ಬಳಸಿಕೊಳ್ಳದೇ ಉದ್ಯೋಗಕ್ಕೆ ಸಹಾಯವಾಗುವ ಕೌಶಲ್ಯತೆಯನ್ನು ಬೆಳೆಸಿಕೊಳ್ಳಲು ಉಪಯೋಗಿಸಬೇಕು. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕಾಲಕ್ಕೆ ತಕ್ಕಂತೆ ಕೌಶಲ್ಯತೆಯನ್ನು ಬೆಳೆಸಿಕೊಳ್ಳಲು ಹಾಗೂ ಸ್ವಯಂ ಉದ್ಯೋಗ, ಯುವನಿಧಿ ಯೋಜನೆಯ ಮಾಹಿತಿಗಾಗಿ ಇಂತಹ ಕಾರ್ಯಾಗಾರದ ಸದುಪಯೋಗಪಡಿಸಿಕೊಳ್ಳಬೇಕೆಂದರು.

ಆನಂದ ಹೊಂಬಳ ಅವರು ರಾಜ್ಯ ಸರ್ಕಾರದ ಯುವನಿಧಿ ಯೋಜನೆ ಹಾಗೂ ಸ್ವಯಂ ಉದ್ಯೋಗ, ಸರಕಾರದಿಂದ ಸಿಗುವ ಸೌಲಭ್ಯಗಳ ಕುರಿತು ವಿವರಿಸಿದರು. ಕಾಲೇಜಿನ ಪ್ರಾಂಶುಪಾಲ ಪಿ.ಡಿ. ಕರಿಗಾರ ಮಾತನಾಡಿ, ಯುವನಿಧಿ ಯೋಜನೆಯ ಕುರಿತ ಕಾರ್ಯಾಗಾರವು ಕೌಶಲ್ಯ ಅಭಿವೃದ್ಧಿಪಡಿಸಿಕೊಳ್ಳಲು ಸಹಕಾರಿಯಾಗಲಿದೆ ಎಂದರು.

ಈ ಸಂದರ್ಭದಲ್ಲಿ ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ವಿದ್ಯಾಧರ ದೊಡಮನಿ, ಉದ್ಯೋಗ ವಿನಿಮಯ ಅಧಿಕಾರಿ ಬಸವಂತಪ್ಪ ಪಿ, ಮೆಹಬೂಬ ಅರಿಫ್ ಸೇರಿದಂತೆ ಕಾಲೇಜಿನ ಶಿಕ್ಷಕ ವೃಂದದವರು, ಸಿಬ್ಬಂದಿಗಳು, ಕಾಲೇಜಿನ ವಿದ್ಯಾರ್ಥಿನಿಯರು ಹಾಜರಿದ್ದರು. ಎಸ್.ಯು. ಸಜ್ಜನಶೆಟ್ಟರ್ ಕಾರ್ಯಕ್ರಮ ನಿರೂಪಿದರು. ತೇಜಸ್ವಿನಿ ವಂದಿಸಿದರು.

ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಗದಗ ಜಿಲ್ಲೆ ಶೇ. 99.79ರಷ್ಟು ಪ್ರಗತಿ ಸಾಧಿಸಿ ರಾಜ್ಯದಲ್ಲಿಯೇ ಪ್ರಥಮ ಸ್ಥಾನದಲ್ಲಿದೆ. ಗ್ಯಾರಂಟಿ ಯೋಜನೆಗಳ ಸೌಲಭ್ಯ ದೊರೆಯುವಲ್ಲಿ ಏನಾದರೂ ಸಮಸ್ಯೆಗಳಿದ್ದಲ್ಲಿ ಗ್ಯಾರಂಟಿ ಸಮಿತಿಯ ಕಚೇರಿಗಳಿಗೆ ಸಂಪರ್ಕಿಸಿ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ. ಗದಗ ಜಿಲ್ಲೆಯು ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಇಡೀ ದೇಶಕ್ಕೆ ಮಾದರಿಯಾಗಿದೆ ಎಂಬುದು ಹೆಮ್ಮೆಯ ವಿಷಯ ಎಂದು ಬಿ.ಬಿ. ಅಸೂಟಿ ತಿಳಿಸಿದರು.

## ಬಣ್ಣದಲ್ಲಿ ಮಿಂದೆದ್ದ ಗ್ರಾಮಗಳು




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಹಿರಿಯರ ಕಾಲದಿಂದಲೂ ಆಚರಿಸಿಕೊಂಡು ಬಂದಂತೆ ಸಾಂಪ್ರದಾಯಿಕ ಹೋಳಿ ಹಬ್ಬವನ್ನು ಸಡಗರ-ಸಂಭ್ರಮದಿಂದ ಆಚರಿಸಲಾಯಿತು.

ಅಡರಕಟ್ಟಿ, ಮಂಜಲಾಪೂರ, ಬಡ್ನಿ, ಬಟ್ಟೂರ, ಆದ್ರಳ್ಳಿ, ಸೋಗಿವಾಳ, ಸಂಕದಾಳ, ಸೂರಣಗಿ ಕೊಕ್ಕರಗೊಂದಿ, ದೊಡ್ಡೂರ, ಶ್ಯಾಬಳಾ ಉಳ್ಳಟ್ಟಿ, ಗೊಜನೂರ, ಅಕ್ಕಿಗುಂದ, ಯಳವತ್ತಿ, ಮಾಡಳ್ಳಿ, ಯತ್ನಳ್ಳಿ ಸೇರಿ ತಾಲೂಕಿನ ಬಹುತೇಕ ಗ್ರಾಮಗಳಲ್ಲಿ ಹೋಳಿ ಹುಣ್ಣಿಮೆ ಪ್ರಯುಕ್ತ ಯುವಕರು, ಮಕ್ಕಳು ಪರಸ್ಪರ ಬಣ್ಣ ಎರಚಿ ರಂಗಿನೋಕುಳಿಯಲ್ಲಿ ಮಿಂದೆದ್ದರು.

ಬೆಳ್ಳಂಬೆಳಿಗ್ಗೆಯೇ ಮಕ್ಕಳು ಬಣ್ಣದ ನೀರು ತುಂಬಿದ್ದ ಪಿಚಕಾರಿ ಮತ್ತು ಪ್ಲಾಸ್ಟಿಕ್ ಬಾಟಲಿಗಳನ್ನು ಹಿಡಿದು ಪರಸ್ಪರ ಬಣ್ಣ ಎರಚಿ ಖುಷಿಪಟ್ಟರು. ಸುಡುಬಿಸಿಲು ಲೆಕ್ಕಿಸದೇ ಹಲವೆಡೆ ಅಣುಕು ಶವಯಾತ್ರೆ, ಆಕರ್ಷಕ ಉಡುಗೆ ತೊಟ್ಟು ಹಲಗೆಯ ತಾಳಕ್ಕೆ ತಕ್ಕಂತೆ ಕುಣಿದರು. ರಸ್ತೆಯಲ್ಲಿ ಹೋಗುತ್ತಿದ್ದವರಿಗೆ ಬಣ್ಣ ಹಚ್ಚಿ ಖುಷಿಪಟ್ಟರು. ಗೊಜನೂರ ಸೇರಿ ಕೆಲವು ಗ್ರಾಮಗಳಲ್ಲಿ ಎತ್ತಿನ ಬಂಡಿ ಮೆರವಣಿಗೆಯನ್ನು ಅತ್ಯಂತ ವಿಜೃಂಭಣೆಯಿಂದ ನೆರವೇರಿಸಲಾಯಿತು.

ಓಕುಳಿ ಬಳಿಕ ಕಾಮನದಹನದ ಸಂಪ್ರದಾಯ ನೆರವೇರಿಸಲಾಯಿತು. ಮಂಗಳವಾರವೂ ಕೆಲವು ಗ್ರಾಮಗಳಲ್ಲಿ ಓಕಳಿ ಹಬ್ಬ ನಡೆದಿದೆ. ಗುರುವಾರ ತಾಲೂಕಿನ ಒಡೆಯರಮಲ್ಲಾಪುರ ಗ್ರಾಮದಲ್ಲಿ ಬಣ್ಣದ ಹಬ್ಬ ಆಚರಿಸಲಾಗುತ್ತಿದೆ. ಇನ್ನು ಶನಿವಾರ ಲಕ್ಷ್ಮೇಶ್ವರ ಮತ್ತು ಶಿಗ್ಲಿಯಲ್ಲಿ ರಂಗಪಚಮಿ ಆಚರಿಸಲಾಗುತ್ತಿದೆ. ಆದರೆ ಈ ವರ್ಷ ಶಿಗ್ಲಿ ಗ್ರಾಮದಲ್ಲಿ ಇತ್ತೀಚೆಗೆ ಗ್ರಾಮದೇವಿ ಜಾತ್ರೆ ನಡೆದ ಹಿನ್ನೆಲೆಯಲ್ಲಿ ಬಣ್ಣದಾಟ ಆಡದೆ ಕೇವಲ ಕಾಮದಹನ ಮಾಡಲು ಗ್ರಾಮಸ್ಥರು ನಿರ್ಧರಿಸಿದ್ದಾರೆ.

ಬಿಸಿಲಿನ ಪ್ರಮಾಣ ಹೆಚ್ಚಿರುವುದರಿಂದ ಬೆಳಿಗ್ಗೆ 8ರಿಂದ ಮಧ್ಯಾಹ್ನ 12 ಗಂಟೆಯೊಳಗೆ ಹಬ್ಬದ ಆಚರಣೆ ಪೂರ್ಣಗೊಳಿಸಿ ಆರೋಗ್ಯ ಕಾಪಾಡಿಕೊಳ್ಳಿ. ಅಲ್ಲದೇ ಕುಡಿಯುವ ನೀರಿನ ಸಮಸ್ಯೆ ಇರುವುದರಿಂದ ನೀರನ್ನು ಹಿತ-ಮಿತವಾಗಿ ಬಳಸಲು ಪುರಸಭೆ ಮುಖ್ಯಾಧಿಕಾರಿ ಮಾಂತೇಶ ಬೀಳಗಿ ಮನವಿ ಮಾಡಿದ್ದಾರೆ.

## ಮುಂಡರಗಿ ಪೊಲೀಸರ ಕಾರ್ಯಾಚರಣೆ: ಕಳ್ಳತನ ಮಾಡಿದ್ದ ನಾಲ್ವರು ಆರೋಪಿಗಳ ಬಂಧನ

■ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಲಾರಿಗಳಲ್ಲಿದ್ದ ಬ್ಯಾಟರಿ ಹಾಗೂ ಸ್ಟೆಪ್ನಿ ಕಳ್ಳತನ ಪ್ರಕರಣವನ್ನು ಪೊಲೀಸರು ಭೇದಿಸಿ ನಾಲ್ವರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

2025ರ ಡಿಸೆಂಬರ್ ತಿಂಗಳಲ್ಲಿ ಮುಂಡರಗಿ ತಾಲೂಕಿನ ಡಂಬಳ ಗ್ರಾಮದ ಬಸ್ ನಿಲ್ದಾಣ ಹಾಗೂ ಮಠದ ಮುಂದೆ ನಿಲ್ಲಿಸಿದ್ದ ಲಾರಿಗಳಲ್ಲಿದ್ದ ಬ್ಯಾಟರಿ ಮತ್ತು ಸ್ಟೆಪ್ನಿ ಕಳ್ಳತನವಾಗಿದ್ದ ಕುರಿತು ಪ್ರಕರಣ ದಾಖಲಾಗಿತ್ತು.

ಪ್ರಕರಣದ ತನಿಖೆಗಾಗಿ ಗದಗ ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ ಅವರ ಸೂಚನೆಯ ಮೇರೆಗೆ ವಿಶೇಷ ತಂಡ ರಚಿಸಲಾಯಿತು.

ನರಗುಂದ ಉಪವಿಭಾಗದ ಡಿ.ಎಸ್.ಪಿ ಪ್ರಭುಗೌಡ ಕಿರೇದಳ್ಳಿ ಅವರ ಮಾರ್ಗದರ್ಶನದಲ್ಲಿ, ಮುಂಡರಗಿ ಪೊಲೀಸ್ ಇನ್ಸ್‌ಪೆಕ್ಟರ್



ಯಶವಂತ ಬಿಸನಳ್ಳಿ ಹಾಗೂ ಪಿಎಸ್‌ಐ (ಅಪರಾಧ) ಬಿ.ಎನ್. ಯಳವತ್ತಿ ನೇತೃತ್ವದ ತಂಡ 16-02-2026 ರಂದು ನಾಲ್ವರು ಆರೋಪಿತರನ್ನು ಬಂಧಿಸಿದೆ.

ಬಂಧಿತರನ್ನು ಸುನೀಲ ತಂದೆ ರಮೇಶ್ ಭಾವಳ್ಳಿ (25) ಅಳವಂಡಿ, ಕನಕಪ್ಪ ತಂದೆ ಶಂಕ್ರಪ್ಪ ಬಚನಳ್ಳಿ (22) ರಘುನಾಥನಹಳ್ಳಿ, ಅಂದಪ್ಪ ತಂದೆ ನಿಂಗಪ್ಪ ಬಿಸನಳ್ಳಿ (29) ಅಳವಂಡಿ ಹಾಗೂ ಪ್ರವೀಣ ತಂದೆ ಭರಮಪ್ಪ ಪೂಜಾರ (28) ರಘುನಾಥನಹಳ್ಳಿ ಎಂದು ಗುರುತಿಸಲಾಗಿದೆ.

ಆರೋಪಿತರು ಡಂಬಳ, ಕದಾಂಪೂರ, ಮೇವುಂಡಿ, ಬರದೂರು, ಮುಂಡರಗಿ ಹಾಗೂ ವೆಂಕಟಾಪೂರ ಹಾಗೂ ಜಂತ್ಲಿ ಗ್ರಾಮಗಳಲ್ಲಿ ನಿಲ್ಲಿಸಿದ್ದ ವಾಹನಗಳಿಂದ ಬ್ಯಾಟರಿ ಹಾಗೂ ಸ್ಟೆಪ್ನಿಗಳನ್ನು ಕಳ್ಳತನ ಮಾಡಿರುವುದಾಗಿ ಒಪ್ಪಿಕೊಂಡಿದ್ದಾರೆ.

ಪೊಲೀಸರು ಸುಮಾರು 3.70 ಲಕ್ಷ ಮೌಲ್ಯದ 40 ಎಕ್ಸೈಡ್ ಕಂಪನಿಯ ಬ್ಯಾಟರಿಗಳು, ಒಂದು ಸ್ಟೆಪ್ನಿ ಹಾಗೂ ಕಳ್ಳತನಕ್ಕೆ ಬಳಸಿದ ಏಂ-35/೦೦-1284 ನಂಬರಿನ ಬೊಲೇರೋ ವಾಹನ (ಸುಮಾರು 2 ಲಕ್ಷ ಮೌಲ್ಯ) ವಶಪಡಿಸಿಕೊಂಡಿದ್ದಾರೆ.

ಇದೇ ವೇಳೆ, ಮುಂಡರಗಿ ಪೊಲೀಸ್ ಠಾಣಾ ವ್ಯಾಪ್ತಿಯ ಬಾಗೇವಾಡಿ ಗ್ರಾಮದಲ್ಲಿ ಅಪ್ರಾಪ್ತ ಬಾಲಕಿ ಅಪಹರಣ ಪ್ರಕರಣದಲ್ಲೂ ಪೊಲೀಸರು ಆರೋಪಿತನನ್ನು 28-02-2026 ರಂದು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ನೊಂದ ಬಾಲಕಿಗೆ ಸುರಕ್ಷಿತ ಸಂರಕ್ಷಣೆ ಒದಗಿಸಲಾಗಿದೆ.

ಈ ಎರಡು ಪ್ರಕರಣಗಳನ್ನು ಯಶಸ್ವಿಯಾಗಿ ಪತ್ತೆ ಹಚ್ಚಲು ಶ್ರಮಿಸಿದ ಮುಂಡರಗಿ ಪೊಲೀಸ್ ಇನ್ಸಪೆಕ್ಟರ್ ಯಶವಂತ ಬಿಸನಳ್ಳಿ, ಪಿಎಸ್‌ಐ ಬಿ.ಎನ್. ಯಳವತ್ತಿ, ಎಎಸ್‌ಐ ಎಸ್.ಎಂ. ಹಡಪದ ಹಾಗೂ ಸಿಬ್ಬಂದಿಗಳಾದ. ಜೆ ಐ ಬಚ್ಚೇರಿ, ಲಕ್ಷ್ಮಣ್ಣ ಲಮಾಣಿ, ಸುರೇಶ್ ಡೊಣ್ಣಿ, ಹೇಮಂತ ಹಂಚಿನಾಳ, ಬಾಬಾಜಾನ್ ಕಮ್ಮಾರ, ವಿರೇಶ್ ಬಿಸನಹಳ್ಳಿ, ವಿನಾಯಕ ಬಾಲರಡ್ಡಿ, ನಾಗರಾಜ್ ಹರಪನಹಳ್ಳಿ, ಶರಣಪ್ಪ ಓಜನಹಳ್ಳಿ ಬಸವರಾಜ ಬಣಕಾರ, ಮುಕ್ಕಣ್ಣ ಪೂಜಾರಗೆ ಗದಗ ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ ಪ್ರಶಂಸೆ ವ್ಯಕ್ತಪಡಿಸಿ ಬಹುಮಾನ ಘೋಷಿಸಿದ್ದಾರೆ.

# ಹೆಸ್ಕಾಂ ಕಚೇರಿ ವಿರುದ್ಧ ಪ್ರತಿಭಟನೆಯ ಎಚ್ಚರಿಕೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದ್ಯುತ್ ಸಂಪರ್ಕ ಪಡೆಯುವಾಗ ಗ್ರಾಹಕರು ಹೆಸ್ಕಾಂಗೆ ಎಲ್ಲ ಶುಲ್ಕಗಳನ್ನು ಭರಿಸಿಯೇ ವಿದ್ಯುತ್ ಸಂಪರ್ಕ ಪಡೆದಿರುತ್ತಾರೆ. ಆದರೂ ಕನಿಷ್ಠ ಶುಲ್ಕದ ಹೆಸರಿನಲ್ಲಿ ಹೆಸ್ಕಾಂನವರು ಗ್ರಾಹಕರನ್ನು ಹಗಲು ದರೋಡೆ ಮಾಡುತ್ತಿದ್ದಾರೆ. ಇದು ನಿಲ್ಲಬೇಕೆಂದು ಆಗ್ರಹಿಸಿ ನರೇಗಲ್ಲ ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಹೆಸ್ಕಾಂನ ಮುಖ್ಯ ಅಭಿಯಂತರರಿಗೆ ಪತ್ರ ಬರೆದು ಆಗ್ರಹಿಸಿದ್ದರು.

ಪತ್ರ ಬರೆದು 15 ದಿನಗಳು ಕಳೆದರೂ ಹೆಸ್ಕಾಂನಿಂದ ಯಾವುದೇ ಉತ್ತರ ಬಂದಿಲ್ಲ. ಇದು ಗ್ರಾಹಕರ ಬಗ್ಗೆ ಕಂಪನಿ ಅಧಿಕಾರಿಗಳಿಗೆ ಇರುವ ದಿವ್ಯ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಮೀಟರ್‌ನ ಶುಲ್ಕವೂ ಸೇರಿದಂತೆ ಎಲ್ಲ ಶುಲ್ಕಗಳನ್ನೂ ಗ್ರಾಹಕರು ಕಂಪನಿಗೆ ಕಟ್ಟಿರುತ್ತಾರೆ. ಅಂದರೆ ಮೀಟರ್‌ನ್ನು ಗ್ರಾಹಕರು ಕಂಪನಿಯಿಂದ ಖರೀದಿಸಿದಂತಾಯಿತು. ಒಮ್ಮೆ ಖರೀದಿಸಿದ ಮೀಟರ್‌ನ ಮೇಲೆ ಪ್ರತಿ ಕಿಲೋ ವ್ಯಾಟ್ ಲೆಕ್ಕ ಹಾಕಿ ಮನೆಯ ಗ್ರಾಹಕರಿಗೆ ಪ್ರತಿ ಕಿಲೋ ವ್ಯಾಟ್‌ಗೆ 145 ರೂ.ಗಳನ್ನು, ಅಂಗಡಿಯವರಿಗೆ ಪ್ರತಿ ಕಿಲೋ ವ್ಯಾಟ್‌ಗೆ 215 ರೂ.ಗಳನ್ನು ಪ್ರತಿ ತಿಂಗಳೂ ವಸೂಲಿ ಮಾಡುತ್ತಿರುವುದು ಯಾವ ನ್ಯಾಯ?

ಅಧಿಕಾರಿಗಳ ನಿರ್ಲಕ್ಷ್ಯ ಹೀಗೇ ಮುಂದುವರೆದು ಸಮರ್ಪಕ ಉತ್ತರ ಇನ್ನೊಂದು ವಾರದಲ್ಲಿ ಕಂಪನಿಯಿಂದ ಬಾರದಿದ್ದರೆ ನಮ್ಮ ನಿವೃತ್ತ ಸೈನಿಕರ ಸಂಘ ಹಾಗೂ ಇತರೆ ಸಂಘಟನೆಗಳ ಸಹಯೋಗದೊಂದಿಗೆ ಸ್ಥಳೀಯ ಹೆಸ್ಕಾಂ ಕಚೇರಿ ಎದುರು ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಅಧಿಕಾರಿಗಳನ್ನು ಎಚ್ಚರಿಸಿದ್ದಾರೆ.

### ಶ್ರೀ ರಾಜೇಶ್ವರಿ ಕಲಾ ಕುಟೀರದ 25ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಡಾ. ಬಸವರಾಜ ಬಳ್ಳಾರಿ

# ಶ್ರೀ ರಾಜೇಶ್ವರಿ ಕಲಾ ಕುಟೀರದ ಸೇವೆ ಅಪಾರ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸಂಸ್ಕೃತಿಯ ಪ್ರತೀಕವಾದ ಕಲೆ ವಿವಿಧ ನೃತ್ಯರೂಪಕಗಳ ತರಬೇತಿಯ ಮೂಲಕ ಕಳೆದ 25 ವರ್ಷಗಳಲ್ಲಿ ಸಾವಿರಾರು ಕಲಾವಿದರನ್ನು ಸಿದ್ಧಪಡಿಸಿ ದೇಸೀ ಪರಂಪರೆಯನ್ನು ಸಾದರಪಡಿಸುವಲ್ಲಿ ಕನ್ನಡ ಮತ್ತು ಕಲಾಭಿವೃದ್ಧಿ ಸೇವಾ ಸಂಸ್ಥೆ, ಶ್ರೀರಾಜೇಶ್ವರಿ ಕಲಾ ಕುಟೀರದ ಪಾತ್ರ ಪ್ರಶಂಸನೀಯವಾಗಿದೆ ಎಂದು ಗದಗ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಹೇಳಿದರು.

ನಗರದ ಭಾರತರತ್ನ ಪಂ. ಭೀಮಸೇನ ಜೋಶಿ ರಂಗಮಂದಿರದಲ್ಲಿ ಇತ್ತೀಚೆಗೆ ಜರುಗಿದ ಶ್ರೀರಾಜೇಶ್ವರಿ ಕಲಾ ಕುಟೀರದ 25ನೇ ವಾರ್ಷಿಕೋತ್ಸವ ಸಮಾರಂಭ ಹಾಗೂ ಸಂಗೀತ ನೃತ್ಯೋಲ್ಲಾಸ-2026 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಸ್ವಂತ ಕಟ್ಟಡ ಸೇರಿದಂತೆ ಹಲವು ಮೂಲಭೂತ ಸೌಲಭ್ಯಗಳ ಕೊರತೆಯ ಮಧ್ಯದಲ್ಲಿಯೂ ಸಹ ಸರಕಾರದ ಯಾವುದೇ ಆರ್ಥಿಕ ಸಹಾಯ ಪಡೆಯದೇ ಚಿಕ್ಕ ಮಕ್ಕಳಲ್ಲಿ ಅಡಗಿರುವ ಸೂಕ್ತ ಪ್ರತಿಭೆಯನ್ನು ಗುರುತಿಸಿ ತರಬೇತಿಯ ಮೂಲಕ ಅನಾವರಣಗೊಳಿಸುವಲ್ಲಿ ಸಂಸ್ಥೆಯ ಮುಖ್ಯಸ್ಥ ಗಜಾನನ ವೇರ್ಣೆಕರ ಹಾಗೂ ಸಿಬ್ಬಂದಿ ವರ್ಗ ಸಾರ್ಥಕ ಸೇವೆ ಸಲ್ಲಿಸಿದೆ. ಈ ರೀತಿಯ ಕಲಾಪೋಷಕ ಸಂಸ್ಥೆಗಳು ಗದಗ ಪರಿಸರದಲ್ಲಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ಸಂಗತಿಯಾಗಿದ್ದು, ಸಂಸ್ಥೆ ಮತ್ತಷ್ಟು ಉತ್ತಮ ಕಲಾ ಸೇವೆಯ ಮುಖಾಂತರ ಉತ್ತುಂಗಕ್ಕೇರಲಿ ಎಂದರು.

ಸಮಾರಂಭ ಉದ್ಘಾಟಿಸಿ ಮಾತನಾಡಿದ ನಗರಸಭಾ ಸದಸ್ಯೆ ಅನಿತಾ ವಿಜಯಕುಮಾರ ಗಡ್ಡಿ, 25 ವರ್ಷಗಳಲ್ಲಿ ಶ್ರೀ ರಾಜೇಶ್ವರಿ ಕಲಾ ಕುಟೀರದಲ್ಲಿ ಕಲಾ ರೂಪಕಗಳ ತರಬೇತಿ ಹೊಂದಿದ ವಿದ್ಯಾರ್ಥಿಗಳು ಇಂದು ದೇಶ-ವಿದೇಶಗಳಲ್ಲಿ ಹರಡಿದ್ದು, ಕಲಾ ಕುಟೀರ ಸೇವಾ ಮನೋಭಾವದ ಪ್ರಚುರವಾಗಿದೆ ಎಂದರು.

ಸಂಸ್ಕಾರ ಭಾರತಿ ಉತ್ತರ ಪ್ರಾಂತ ಸಂಘಟನಾ ಕಾರ್ಯದರ್ಶಿ ಶ್ರೀನಿವಾಸ ಗೋಸಾ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಲಾ ಕುಟೀರದ ಸಂಸ್ಥಾಪಕ ಅಧ್ಯಕ್ಷ ಗಜಾನನ ವೇರ್ಣೆಕರ ಸ್ವಾಗತಿಸಿದರು. ಶಿಕ್ಷಕಿ ಜ್ಯೋತಿ ಹೇರಲಗಿ ನಿರೂಪಿಸಿದರು. ಸಂಗೀತ ಶಿಕ್ಷಕಿ ಪೂಜಾ ವೇರ್ಣೆಕರ, ನೃತ್ಯ ನಿರ್ದೇಶಕಿ ಮಾಲಾ ತಂಬ್ರಳ್ಳಿ ಹಾಗೂ ತರಬೇತುದಾರ ಶಿಕ್ಷಕರು ಉಪಸ್ಥಿತರಿದ್ದರು. ಗದಗ ಕಲಾ ಕುಟೀರದ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಿವಿಧ ನೃತ್ಯ ರೂಪಕಗಳು ಕಲಾಸಕ್ತರ ಮನರಂಜಿಸಿದವು.

ಇದೇ ಸಂದರ್ಭದಲ್ಲಿ ನಾಗರಿಕ ದಿನಪತ್ರಿಕೆಯ ವರದಿಗಾರ ಗಣೇಶ ಪೈ, ಪಿಪಿಜಿ ಅಂಧರ ವಸತಿಯುತ ಸಂಗೀತ ಪಾಠಶಾಲೆಯ ಪ್ರಾಚಾರ್ಯ ಕಳಕಪ್ಪ ಮದ್ಲಾಪೂರ, ಕಲಾವಿದರಾದ ಬಸವರಾಜ ನೇಲಜೇರಿ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಗದಗ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಗದಗ ದೈವಜ್ಞ ಸಮಾಜೋನ್ನತಿ ಸಂಘದ ಅಧ್ಯಕ್ಷ ಅರವಿಂದ ಪಾಲನಕರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

# ವಿಜೃಂಭಣೆಯಿಂದ ಜರುಗಿದ ಶ್ರೀ ಬಂಡೆ ರಂಗನಾಥೇಶ್ವರ ಸ್ವಾಮಿ ರಥೋತ್ಸವ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ತಂಬ್ರಹಳ್ಳಿಯ ಇತಿಹಾಸ ಪ್ರಸಿದ್ಧ ಶ್ರೀ ಬಂಡೆ ರಂಗನಾಥೇಶ್ವರ ಸ್ವಾಮಿ ರಥೋತ್ಸವವು ಸುತ್ತಮುತ್ತಲಿನ ಸಾವಿರಾರು ಭಕ್ತರ ಸಮ್ಮುಖದಲ್ಲಿ ಮಂಗಳವಾರ ಸಂಜೆ ಅತ್ಯಂತ ವಿಜೃಂಭಣೆಯಿಂದ ಜರುಗಿತು.

ರಥೋತ್ಸವ ನಿಮಿತ್ತ ಬೆಟ್ಟದ ಮೇಲೆ ನೆಲೆಸಿರುವ ಶ್ರೀ ರಂಗನಾಥ ಸ್ವಾಮಿ ಹಾಗೂ ಲಕ್ಷ್ಮೀ ದೇವಿಗೆ ವಂಶಪಾರಂಪರ್ಯ ಧರ್ಮಕರ್ತರ ಕುಟುಂಬ ಮತ್ತು ಅರ್ಚಕರಿಂದ ಶಾಸ್ತ್ರೋಕ್ತ ಪೂಜಾ ಕೈಂಕರ್ಯಗಳು ನೆರವೇರಿದವು. ಹುಣ್ಣಿಮೆಯ ಪ್ರಯುಕ್ತ ಬೆಳಿಗ್ಗೆ ಶ್ರೀ ಸ್ವಾಮಿಗೆ ಪಂಚಾಮೃತ ಅಭಿಷೇಕ ನಡೆಸಲಾಯಿತು.


ದೇವಸ್ಥಾನ ಸಮಿತಿಯ ಗೌರವ ಅಧ್ಯಕ್ಷರಾದ ಡಾ. ಶ್ರೀ ಮಹೇಶ್ವರ ಸ್ವಾಮೀಜಿಗಳ ನೇತೃತ್ವದಲ್ಲಿ ಸಾಯಂಕಾಲ ಸರ್ವಾಭರಣಗಳಿಂದ ಅಲಂಕೃತಗೊಂಡ ಉತ್ಸವ ಮೂರ್ತಿಯನ್ನು ಬೆಟ್ಟದಿಂದ ಕೆಳಗಡೆ ರಥಬೀದಿಗೆ ಮೆರವಣಿಗೆಯ ಮೂಲಕ ಕರೆತರಲಾಯಿತು. ರಥದ ಸುತ್ತ ಮೂರು ಸುತ್ತು ಪ್ರದಕ್ಷಿಣೆ ಹಾಕಿಸಿದ ಬಳಿಕ ನಡೆದ ಪಟಾಕ್ಷಿ ಹರಾಜು ಪ್ರಕ್ರಿಯೆಯಲ್ಲಿ ಕೊಪ್ಪಳದ ರಂಗಪ್ಪ ಪೂಜಾರ ಅವರು 3,01,101ಕ್ಕೆ ಹರಾಜು ಪಡೆದುಕೊಂಡರು.

ವಿವಿಧ ಹೂಮಾಲೆಗಳು, ಬಾಳೆದಿಂಡುಗಳು ಹಾಗೂ ಬಣ್ಣ ಬಣ್ಣದ ವಸ್ತ್ರಗಳಿಂದ ರಥವನ್ನು ಸುಂದರವಾಗಿ ಅಲಂಕರಿಸಲಾಗಿತ್ತು. ಅಲಂಕೃತ ರಥದಲ್ಲಿ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಿ "ಲಕ್ಷ್ಮೀ ರಮಣಾ... ಗೋವಿಂದ... ಗೋವಿಂದಾ..." ಎಂಬ ಭಕ್ತರ ಜಯಘೋಷದ ನಡುವೆ ರಥೋತ್ಸವ ಆರಂಭವಾಯಿತು. ವಿವಿಧೆಡೆಯಿಂದ ಆಗಮಿಸಿದ ಭಕ್ತರು ಬಾಳೆಹಣ್ಣುಗಳನ್ನು ರಥದತ್ತ ಎಸೆದು ಭಕ್ತಿಭಾವ ಮೆರೆದರು.

ರಥೋತ್ಸವದ ಅಂಗವಾಗಿ ಸ್ಥಳೀಯ ಆರೋಗ್ಯ ಕೇಂದ್ರದ ಸಿಬ್ಬಂದಿಯಿಂದ ರಕ್ತದಾನ ಶಿಬಿರವೂ ಆಯೋಜಿಸಲಾಗಿತ್ತು. ಭದ್ರತಾ ದೃಷ್ಟಿಯಿಂದ ತಂಬ್ರಹಳ್ಳಿ ಪೊಲೀಸ್ ಠಾಣೆಯ ಸಿಬ್ಬಂದಿಯವರು ಸೂಕ್ತ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಿದ್ದರು.

ಧಾರ್ಮಿಕ ಉತ್ಸಾಹ, ಶ್ರದ್ಧಾ ಭಕ್ತಿ ಮತ್ತು ಸಂಭ್ರಮದ ನಡುವೆ ನಡೆದ ರಥೋತ್ಸವ ಗ್ರಾಮದಲ್ಲಿ ಹಬ್ಬದ ವಾತಾವರಣವನ್ನು ಮೂಡಿಸಿತು.

# ಶ್ರೀಶೈಲಂ ದೇವಸ್ಥಾನಕ್ಕೆ 12ನೇ ವರ್ಷದ ಪಾದಯಾತ್ರೆ ಆರಂಭ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಕ್ಷೇತ್ರದ ಕನ್ನಿಹಳ್ಳಿ ಗ್ರಾಮದಿಂದ ಶ್ರೀಶೈಲಂ ದೇವಸ್ಥಾನಕ್ಕೆ 12ನೇ ವರ್ಷದ ಪಾದಯಾತ್ರೆ ಬುಧವಾರ ಭಕ್ತಿ ಭಾವದಿಂದ ಆರಂಭಗೊಂಡಿತು. ಈ ವರ್ಷ ಒಟ್ಟು 60 ಯಾತ್ರಿಕರು ಭಜನೆ, ನಾಮಸಂಕೀರ್ತನೆಗಳೊಂದಿಗೆ ಪಾದಯಾತ್ರೆ ಕೈಗೊಂಡಿದ್ದಾರೆ.

ಪಾದಯಾತ್ರೆಗೆ ಮುನ್ನ ಗ್ರಾಮದಲ್ಲಿನ ದೇವಸ್ಥಾನದಲ್ಲಿ ವಿಶೇಷ ಪೂಜೆ ನೆರವೇರಿಸಿ ಶ್ರೀ ಭ್ರಮರಾಂಭ ದೇವಿ ಹಾಗೂ ಶ್ರೀ ಮಲ್ಲಿಕಾರ್ಜುನ ಸ್ವಾಮಿಗೆ ಕೃಪೆ ಕೋರಿ ಭಕ್ತರು ಪ್ರಾರ್ಥಿಸಿದರು.

ಕನ್ನಿಹಳ್ಳಿ ಗ್ರಾಮದಿಂದ ಬೆಳಿಗ್ಗೆ ಉಪಹಾರ ಸೇವಿಸಿ ಪಾದಯಾತ್ರೆ ಆರಂಭಿಸಿದ ಯಾತ್ರಿಕರು ಮಾರ್ಗಮಧ್ಯೆ ಹಗರಿಬೊಮ್ಮನಹಳ್ಳಿ ಪಟ್ಟಣಕ್ಕೆ ಆಗಮಿಸಿದರು.

ಪಾ ದ ' ಂ ು ' ು ಾ ತ್ರೆ ು ಂ ು ' ು ಮಧ್ಯದಲ್ಲಿ ಹಗರಿಬೊಮ್ಮನಹಳ್ಳಿ ರಾಮನಗರದ ಕನ್ನಿಹಳ್ಳಿ ಚಂದ್ರಶೇಖರ್ ಅವರ ಮನೆಯಲ್ಲಿ ಶ್ರೀಶೈಲ ಮಲ್ಲಿಕಾರ್ಜುನ ಮಹಾಪೂಜೆ, ಭಜನೆ ಹಾಗೂ ಮಹಾಮಂಗಳಾರತಿ ಕಾರ್ಯಕ್ರಮ ಭಕ್ತಿಭಾವದಿಂದ ನಡೆಯಿತು. ಪ್ರತಿ ವರ್ಷದಂತೆ ಈ ಬಾರಿ ಕೂಡ ಯಾತ್ರಿಕರಿಗೆ ಮಧ್ಯಾಹ್ನದ ಭೋಜನವನ್ನು ಚಂದ್ರಶೇಖರ್ ಅವರ ಮನೆಯಲ್ಲಿ ವ್ಯವಸ್ಥೆ ಮಾಡಲಾಗಿತ್ತು.

ಈ ಸಂದರ್ಭದಲ್ಲಿ ಹಲವು ಗಣ್ಯರು ಉಪಸ್ಥಿತರಿದ್ದು, ಪಾದಯಾತ್ರೆ ಯಶಸ್ವಿಯಾಗಿ ನೆರವೇರಲೆಂದು ಭಕ್ತರು ಪ್ರಾರ್ಥಿಸಿದರು. ಕಾರ್ಯಕ್ರಮದಲ್ಲಿ ಪಟ್ಟಣ ಹಾಗೂ ಗ್ರಾಮದ ಗುರುಹಿರಿಯರು, ಯುವಕರು ಹಾಗೂ ಮಹಿಳೆಯರು ಭಾಗವಹಿಸಿದ್ದರು.

### ಕರ್ನಾಟಕ ಆರ್ಯವೈಶ್ಯ ಯುವಜನ ಮಹಾಸಭಾದ ರಾಜ್ಯಾಧ್ಯಕ್ಷರಾಗಿ ಅವಿರೋಧ ಆಯ್ಕೆ

# ಜಿ.ವಿ. ಭೀಮರಾಜ್ ಗಂಗಾವತಿ ನೂತನ ರಾಜ್ಯಾಧ್ಯಕ್ಷ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ಯುವ ಮುಖಂಡ ಜಿ.ವಿ. ಭೀಮರಾಜ್ ಗಂಗಾವತಿ (ಜಿ.ವಿ. ಭರತ್ ಗಂಗಾವತಿ) ಅವರು ಕರ್ನಾಟಕ ಆರ್ಯವೈಶ್ಯ ಯುವಜನ ಮಹಾಸಭೆಯ 2026-2028ನೇ ಸಾಲಿನ ರಾಜ್ಯಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘಟನೆಯ ವಿವಿಧ ಹಂತಗಳಲ್ಲಿ ಸೇವೆ ಸಲ್ಲಿಸಿರುವ ಭೀಮರಾಜ್ ಅವರು ನಿರ್ದೇಶಕರಾಗಿ, ವಿಭಾಗೀಯ ಉಪಾಧ್ಯಕ್ಷರಾಗಿ, ರಾಜ್ಯ ಸಂಘಟನಾ ಕಾರ್ಯದರ್ಶಿಯಾಗಿ ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಸಮರ್ಥವಾಗಿ ಜವಾಬ್ದಾರಿಗಳನ್ನು ನಿರ್ವಹಿಸಿದ್ದರು. ಹಗರಿಬೊಮ್ಮನಹಳ್ಳಿಯ ವಾಸವಿ ಯುವಜನ ಸಂಘದಲ್ಲಿ ಸುಮಾರು 20 ವರ್ಷಗಳಿಂದ ಸಕ್ರಿಯವಾಗಿ ತೊಡಗಿಸಿಕೊಂಡು ಸಂಘಟನಾ ಚಟುವಟಿಕೆಗಳಲ್ಲಿ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಿರುವ ಅವರು, ರಾಜ್ಯ ಮಟ್ಟದ ಅತ್ಯುತ್ತಮ ವಿಭಾಗೀಯ ಉಪಾಧ್ಯಕ್ಷ ಎಂಬ ಗೌರವಕ್ಕೂ ಪಾತ್ರರಾಗಿದ್ದಾರೆ.



"ಕರ್ನಾಟಕ ಆರ್ಯವೈಶ್ಯ ಯುವಜನ ಮಹಾಸಭೆಗೆ ನನ್ನನ್ನು ಅವಿರೋಧವಾಗಿ ಆಯ್ಕೆ ಮಾಡುವ ಮೂಲಕ ಸಮಾಜಸೇವೆ ಮಾಡಲು ಮತ್ತಷ್ಟು ಅವಕಾಶ ಕಲ್ಪಿಸಿದ ಎಲ್ಲರಿಗೂ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸುತ್ತೇನೆ. ಸಮಾಜದ ಏಕತೆ ಮತ್ತು ಯುವಜನರ ಸಂಘಟನೆಗೆ ಹೆಚ್ಚಿನ ಒತ್ತು ನೀಡಿ ಕಾರ್ಯನಿರ್ವಹಿಸುತ್ತೇನೆ," ಎಂದು ನೂತನ ರಾಜ್ಯಾಧ್ಯಕ್ಷ ಜಿ.ವಿ. ಭೀಮರಾಜ್ ಗಂಗಾವತಿ ಪ್ರತಿಕ್ರಿಯೆ ನೀಡಿದ್ದಾರೆ.

ಇವರ ಅವಿರೋಧ ಆಯ್ಕೆಗೆ ಹಗರಿಬೊಮ್ಮನಹಳ್ಳಿ ಆರ್ಯವೈಶ್ಯ ಸಮಾಜದ ಹಿರಿಯರಾದ ಜಿ.ವಿ. ಲಕ್ಷ್ಮೀಪತಿ, ಡಿ. ಗೋಪಾಲ ಶೆಟ್ರು, ವೆಂಕಟ ಚಲಪತಿ, ಕೊರಗಲ್ ರಾಘಣ್ಣ, ಗಂಗಾವತಿ ಸುದರ್ಶನ, ಗಂಗಾವತಿ ಮಂಜಣ್ಣ, ಪ್ರಭಾಕರ ಶೆಟ್ರು, ಆಂಜನೇಯ ಶೆಟ್ರು, ಡಾ. ಬಂಡ್ರಿ ವಿಶ್ವನಾಥ, ಜನಾದ್ರಿ ರಾಘವೇಂದ್ರ, ಜಿ. ಹನುಮಣ್ಣ ಸೇರಿದಂತೆ ಅನೇಕರು ಅಭಿನಂದನೆ ಸಲ್ಲಿಸಿದ್ದಾರೆ.

ಯುವಜನ ಸಂಘದ ಕೊರಗಲ್ ಗಿರೀಶ್, ಬನ್ನಿಕಲ್ ಮಹೇಶ್, ಗಂಗಾವತಿ ಹರ್ಷಣ್ಣ, ಪಾನ್ ಶಾಪ್ ಪುಟ್ಟ, ಮಂಗನಹಳ್ಳಿ ಹರೀಶ್, ಮಂಗನಹಳ್ಳಿ ಸತೀಶ್, ಬಸಾಪುರ ರಾಘಣ್ಣ, ಮಾಡಿಶೆಟ್ಟಿ ಪ್ರೇಮನಾಥ, ಬಂಡ್ರಿ ರಾಘವೇಂದ್ರ, ಕಡ್ಲಬಾಳ ರಮೇಶ್, ಬಿ.ಎಂ. ಕುಶಾಲ್, ಬಿ.ಎಂ. ರಾಘವೇಂದ್ರ, ಮರಿಯಮ್ಮನಹಳ್ಳಿ ರಾಘವೇಂದ್ರ, ವಿ. ರಾಘವೇಂದ್ರ, ಬಿ. ಪ್ರವೀಣ್ ಕುಮಾರ್, ಬೇಕರಿ ರಮೇಶ್ ಹಾಗೂ ಮಹಿಳಾ ಆರ್ಯವೈಶ್ಯ ಸಂಘ, ವಾಸವಿ ವನಿತಾ ಆರ್ಯವೈಶ್ಯ ಸಂಘ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಶುಭಾಶಯ ಕೋರಿದ್ದಾರೆ.

# ಭಾರತೀಯ ಸಂಸ್ಕೃತಿಗೆ ಜನಪದ ಮೂಲ ಬೇರು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಭಾರತೀಯ ಸಂಸ್ಕೃತಿಗೆ ಇಲ್ಲಿನ ಜನಪದವೇ ಮೂಲ ಬೇರಾಗಿದೆ. ಜನಪದರು ತಮ್ಮ ಜೀವನದುದ್ದಕ್ಕೂ ಹಾಡಿ ನಲಿದ ಹಾಡುಗಳು, ಪ್ರದರ್ಶಿಸಿದ ಕಲೆಗಳು ಇಂದಿಗೂ ಜೀವಂತವಾಗಿದ್ದು, ಅವು ಒಂದು ಪೀಳಿಗೆಯಿಂದ ಮತ್ತೊಂದು ಪೀಳಿಗೆಗೆ ಸಾಗಿ ಬಂದಿರುವುದು ನಮ್ಮೆಲ್ಲರ ಹೆಮ್ಮೆಯಾಗಿದೆ ಎಂದು ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ರೋಣದ ಸ್ಪಂದನಾ ಮಹಿಳಾ ಮಂಡಳದವರು ಹಮ್ಮಿಕೊಂಡಿದ್ದ ಜಾನಪದ ಕಲೋತ್ಸವವನ್ನು ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

ಹಿಂದಿನ ಕಾಲದಲ್ಲಿ ಮಹಿಳೆಯ ಜಗತ್ತು ಮನೆಯ ಹೊಸ್ತಿಲೊಳಗೆ ಇತ್ತು. ಆದರೆ ಇಂದು ಮಹಿಳೆ ಪುರುಷರಷ್ಟೇ ಸಮಾನವಾಗಿ ಎಲ್ಲ ಕ್ಷೇತ್ರಗಳಲ್ಲಿಯೂ ತನ್ನ ಸಾಧನೆಯನ್ನು ತೋರುತ್ತಿದ್ದಾಳೆ. ಮಹಿಳೆಯಲ್ಲಿನ ಪ್ರತಿಭೆಯನ್ನು ಹೊರಹಾಕಲು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ರೋಣದ ಸ್ಪಂದನಾ ಮಹಿಳಾ ಮಂಡಳದವರು ಅಧ್ಯಕ್ಷೆ ಶಶಿಕಲಾ ಪಾಟೀಲ ಅವರ ಮುಂದಾಳತ್ವದಲ್ಲಿ ಏರ್ಪಡಿಸಿರುವ ಈ ಜಾನಪದ ಕಲೋತ್ಸವ ಶ್ಲಾಘನೀಯ ಎಂದರು.

ಸ್ಪಂದನಾ ಮಹಿಳಾ ಮಂಡಳದ ಅಧ್ಯಕ್ಷೆ ಶಶಿಕಲಾ ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಹಿಳೆ ತಾನು ಏನು ಎಂಬುದನ್ನು ತೋರಿಸಲು ಪ್ರತಿ ವರ್ಷದ ಮಾರ್ಚ್ 8ರಂದು ಅಂತಾರಾಷ್ಟ್ರೀಯ ಮಹಿಳಾ ದಿನವನ್ನು ಆಚರಿಸಲಾಗುತ್ತಿದೆ. ಅವಳಿಗೆ ಮನೆ, ಗಂಡ, ಮಕ್ಕಳು ಇದಿಷ್ಟೇ ಜಗತ್ತಲ್ಲ. ಅದರಾಚೆಗೂ ಅವಳು ತನ್ನಲ್ಲಿನ ಪ್ರತಿಭೆಯನ್ನು ತೋರಿಸಬಲ್ಲಳು ಎಂಬುದನ್ನು ತಿಳಿಸಲು ಈ ದಿನಾಚರಣೆ ನಡೆಯುತ್ತಿದೆ ಎಂದರು.

ಜಾನಪದ ಕಲೋತ್ಸವದಲ್ಲಿ ಮಹಿಳೆಯರು ಜಾನಪದ ಹಾಡುಗಳನ್ನು ಹಾಡಿದರು, ನೃತ್ಯ ಮಾಡಿದರು, ಒಡಪುಗಳನ್ನು ಹೇಳಿದರು. ನರೇಗಲ್ಲ, ಹಾಲಕೆರೆ, ಅಬ್ಬಿಗೇರಿ, ನಿಡಗುಂದಿ, ಜಕ್ಕಲಿ, ತೋಟಗಂಟಿ ಮುಂತಾದ ಊರುಗಳ ಸ್ಪರ್ಧಿಗಳು ಭಾಗವಹಿಸಿದ್ದರು.

ನಿವೃತ್ತ ಶಿಕ್ಷಕಿ ರತ್ನಮ್ಮ ಧಡೇಸೂರಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಅನ್ನಪೂರ್ಣೇಶ್ವರಿ ಮಹಿಳಾ ಮಂಡಳದ ಅಧ್ಯಕ್ಷೆ ಕಸ್ತೂರಿಬಾಯಿ ಧನ್ನೂರ, ರೇಣುಕಾ ಧರ್ಮಾಯತ, ವಿಜಯಲಕ್ಷ್ಮಿ ಪೊಲೀಸ್‌ಪಾಟೀಲ, ಮಲ್ಲನಗೌಡ ಪಾಟೀಲ, ಎಂ.ಎಸ್. ಪಾಟೀಲ, ಮಂಜುನಾಥ ಪಾಟೀಲ, ದೇಸಾಯಿಗೌಡ್ರ, ಪಿ.ಆರ್. ಹಿರೇಮಠ, ಎಂ.ಎಸ್. ಧಡೇಸೂರಮಠ, ಅಲ್ಲಾಬಕ್ಷಿ ನದಾಫ್, ಮೈಲಾರಪ್ಪ ಚಳ್ಳಮರದ, ಅಂದಪ್ಪ ಧರ್ಮಾಯತ, ನಿಂಗಪ್ಪ ಲಕ್ಕನಗೌಡ್ರ, ಗುಡದಪ್ಪ ಗೋಡಿ, ಶೇಕಪ್ಪ ಜುಟ್ಲದ ಮುಂತಾದವರಿದ್ದರು.

# ಹಗರಿಬೊಮ್ಮನಹಳ್ಳಿಯಲ್ಲಿ ಯುವಕರಿಂದ ರಂಗಿನೋಕುಳಿ ರಂಗಪಂಚಮಿ, ಸಂಭ್ರಮಾಚರಣೆ




■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪ್ರತಿವರ್ಷವೂ ಸಡಗರ-ಸಂಭ್ರಮದಿಂದ ಆಚರಿಸಲ್ಪಡುವ ಹೋಳಿ ಹಬ್ಬವು ನಮ್ಮ ದೇಶದಲ್ಲಿ ತನ್ನದೇ ಆದ ಪೌರಾಣಿಕ ಮಹತ್ವ ಹೊಂದಿದೆ. ಆದಿಕಾಲದಿಂದಲೂ ಜನರು ಭಕ್ತಿ ಹಾಗೂ ಹರ್ಷಭಾವದಿಂದ ಈ ಹಬ್ಬವನ್ನು ಆಚರಿಸಿಕೊಂಡು ಬರುತ್ತಿದ್ದಾರೆ.

ಹಿಂದಿನ ದಿನಮಾನಗಳಲ್ಲಿ ಹೋಳಿ ಆಚರಣೆ ವಿಭಿನ್ನ ರೀತಿಯಲ್ಲಿತ್ತು. ಕತ್ತೆಗಳನ್ನು ಹಿಡಿದು ಅವುಗಳ ಬಾಲಕ್ಕೆ ಖಾಲಿ ಬುರುಡಿ ಕಟ್ಟಿ ಪಟ್ಟಣದಾದ್ಯಂತ ಅಟ್ಟಾಡಿಸುವುದು, ರತಿ-ಮನ್ಮಥರ ದಹನ ಮಾಡುವುದು, ಕುಂಬಾರರು ಮಾಡಿದ ಮಣ್ಣಿನ ಗಡಿಗೆಗಳನ್ನು ತಂದು ವಿವಿಧ ವಸ್ತುಗಳನ್ನು ಹಾಕಿ ಮನೆ ಮುಂದೆ ಇಡುವುದು, ಸತ್ತಂತೆ ನಟಿಸಿ ಮೆರವಣಿಗೆ ಮಾಡುವಂತಹ ಸಂಪ್ರದಾಯಗಳು ಕಂಡು ಬರುತ್ತಿದ್ದವು. ಹೋಳಿ ಹಿಂದಿನ ರಾತ್ರಿ ಈ ರೀತಿಯ ವಿನೋದಮಯ ಆಚರಣೆ ನಡೆದರೆ, ಮಾರನೇ ದಿನ ಬಣ್ಣದಾಟ ಜೋರಾಗಿರುತ್ತಿತ್ತು.

ಆ ಕಾಲದಲ್ಲಿ ಬಣ್ಣದಾಟದಲ್ಲಿ ವಾರ್ನೀಸು, ಕೀಲೆಣ್ಣೆ, ಗ್ರೀಸು, ಮೊಟ್ಟೆ ಮೊದಲಾದವುಗಳನ್ನು ಬೆರೆಸಿ ಹಚ್ಚುವ ಮೂಲಕ ಅತಿರೇಕ ನಡೆಯುತ್ತಿತ್ತು. ಇದರಿಂದ ಬಣ್ಣದ ಕಲೆಗಳು ವಾರಗಟ್ಟಲೆ ಹೋಗದ ಪರಿಸ್ಥಿತಿಯೂ ಉಂಟಾಗುತ್ತಿತ್ತು.

ಇತ್ತೀಚಿನ ವರ್ಷಗಳಲ್ಲಿ "ಕಲರ್ಸ್ ವಿತ್ ಕಾರಂಜಿ" ಎಂಬ ಪರಿಕಲ್ಪನೆಯಡಿ ಮಕ್ಕಳು, ಯುವಕರು, ಮಹಿಳೆಯರು, ಹಿರಿಯರು ಯಾವುದೇ ಭೇದವಿಲ್ಲದೆ ಒಂದೇ ವೇದಿಕೆಯಲ್ಲಿ ಸೇರಿ ಬಣ್ಣದಾಟದಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಇದು ಒಗ್ಗಟ್ಟಿನ ಸಂಕೇತವಾಗಿ ಪರಿಣಮಿಸಿದ್ದು, ಹಬ್ಬದ ವಾತಾವರಣವನ್ನು ಮತ್ತಷ್ಟು ಹಬ್ಬಿಸುತ್ತದೆ.

ಉತ್ತರ ಭಾರತದ ಕೆಲವು ಭಾಗಗಳಲ್ಲಿ ಗಂಡು-ಹೆಣ್ಣು ಬೇಧವಿಲ್ಲದೆ ಮುಕ್ತವಾಗಿ ಓಕುಳಿ ಆಟವಾಡುವ ಸಂಪ್ರದಾಯವಿದ್ದರೆ, ನಮ್ಮ ಭಾಗದಲ್ಲೂ ಇದೀಗ ಅದೇ ರೀತಿಯ ಮುಕ್ತ ವಾತಾವರಣ ನಿರ್ಮಾಣವಾಗುತ್ತಿದೆ.

ಆದರೆ ಹಬ್ಬದ ಸಂಭ್ರಮದಲ್ಲಿ ಕೆಲವರು ಕುಡಿತಕ್ಕೆ ಒಳಗಾಗುವುದು ಕಳವಳಕಾರಿ ಸಂಗತಿಯಾಗಿದೆ. ಬಣ್ಣದಾಟದ ನಂತರ ಮದ್ಯಪಾನದ ಗುಂಗಿನಲ್ಲಿ ವಾಹನ ಚಲಾಯಿಸಿ ಅಪಘಾತಕ್ಕೀಡಾದ ಉದಾಹರಣೆಗಳು ಕಂಡು ಬಂದಿವೆ. ಯುವ ಪೀಳಿಗೆ ಎಚ್ಚರಿಕೆಯಿಂದ ಹಬ್ಬವನ್ನು ಆಚರಿಸಬೇಕು ಎಂಬ ಅಭಿಪ್ರಾಯ ಸಾರ್ವಜನಿಕರಿಂದ ವ್ಯಕ್ತವಾಗಿದೆ.

ಬಣ್ಣಗಳು ನೋಡುಗರ ಕಣ್ಣಿಗೆ ಸಂತೋಷ ಉಂಟುಮಾಡುವವು. ಪ್ರತಿಯೊಂದು ಬಣ್ಣಕ್ಕೂ ತನ್ನದೇ ಆದ ಅರ್ಥ ಮತ್ತು ಮಹತ್ವವಿದೆ. ಹಗರಿಬೊಮ್ಮನಹಳ್ಳಿ ಪಟ್ಟಣದಲ್ಲಿ ಕಳೆದ ಒಂಭತ್ತು ವರ್ಷಗಳಿಂದ "ಕಲರ್ಸ್ ಕಾರಂಜಿ" ಎಂಬ ವಿನೂತನ ಕಾರ್ಯಕ್ರಮದಡಿ ರಾಮನಗರ ರೈತರ ಓಣಿ, ಬಸವೇಶ್ವರ ಬಜಾರ್, ತೇರು ಬೀದಿ, ಹಳೆ ಊರು ತಂಬ್ರಹಳ್ಳಿ ಸರ್ಕಲ್ ಸೇರಿದಂತೆ ವಿವಿಧ ಭಾಗಗಳಲ್ಲಿ ಸಂಭ್ರಮಾಚರಣೆ ನಡೆಯುತ್ತಿದೆ.

ಈ ವರ್ಷವೂ ಡಿಜೆ ಸೌಂಡ್ ವ್ಯವಸ್ಥೆಯೊಂದಿಗೆ ಯುವಕರು ತಮಗಿಷ್ಟವಾದ ಹಾಡುಗಳಿಗೆ ಕುಣಿದು-ಕುಪ್ಪಳಿಸಿ ಪಟ್ಟಣವನ್ನು ರಂಗೇರಿಸಿದರು. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸರು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು ಕಾನೂನು ಸುವ್ಯವಸ್ಥೆ ಕಾಪಾಡಿದರು. ಒಟ್ಟಾರೆ, ಹಗರಿಬೊಮ್ಮನಹಳ್ಳಿಯಲ್ಲಿ ರಂಗಪಂಚಮಿ ಹಬ್ಬವು ಏಕತೆಯ ಸಂದೇಶ ಸಾರುವ ರಂಗಿನ ಸಂಭ್ರಮವಾಗಿ ನೆರವೇರಿತು.

## ಶ್ರೀ ಯೋಗಿ ನಾರಾಯಣ ಯತೀಂದ್ರ ಜಯಂತಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ಕೈವಾರ ತಾತಯ್ಯ ಎಂದೇ ಪ್ರಸಿದ್ಧರಾದ ಶ್ರೀ ಯೋಗಿ ನಾರಾಯಣ ಯತೀಂದ್ರ ಅವರ ಜಯಂತಿಯನ್ನು ಸರಳವಾಗಿ ಆಚರಿಸಲಾಯಿತು.

ಪಟ್ಟಣದ ತಾಲೂಕು ಕಚೇರಿ ಮಿನಿ ವಿಧಾನಸೌಧದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಬಲಿಜ ಸಂಘದ ಅಧ್ಯಕ್ಷ ಪಿ. ಸೂರ್ಯಬಾಬು ಅವರು ಮಾತನಾಡಿ, ದಕ್ಷಿಣ ಭಾರತದ ಪ್ರಸಿದ್ಧ ಸಂತ ಹಾಗೂ ಕಾಲಜ್ಞಾನಿಯಾಗಿದ್ದ ತಾತಯ್ಯನವರ ಜಯಂತಿಯನ್ನು ಪ್ರತಿವರ್ಷ ಪಾಲ್ಗುಣ ಮಾಸದ ಹುಣ್ಣಿಮೆಯಂದು ಆಚರಿಸಲಾಗುತ್ತದೆ ಎಂದು ಹೇಳಿದರು.

ತಾತಯ್ಯನವರ ಆಧ್ಯಾತ್ಮಿಕ ಚಿಂತನೆಗಳು ಹಾಗೂ ಸಮಾಜ ಸುಧಾರಣೆಯ ಸಂದೇಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ. ಕಾಲಜ್ಞಾನ, ಭಕ್ತಿ ಮಾರ್ಗ ಮತ್ತು ಸಮಾಜದಲ್ಲಿನ ಜಾತಿಭೇದಗಳನ್ನು ಖಂಡಿಸುವ ಮೂಲಕ ಅವರು ಸಮಾನತೆಯ ಸಂದೇಶ ಸಾರಿದರು. ತಮ್ಮ ತ್ರಿಪದಿಗಳು ಹಾಗೂ ಕಾಲಜ್ಞಾನ ಗ್ರಂಥಗಳ ಮೂಲಕ ಜನಮಾನಸದಲ್ಲಿ ಅಚ್ಚಳಿಯದ ಸ್ಥಾನ ಪಡೆದಿದ್ದಾರೆ ಎಂದು ಹೇಳಿದರು.

ಇಂದಿನ ಪೀಳಿಗೆಗೆ ತಾತಯ್ಯನವರ ಉಪದೇಶಗಳು ಮಾರ್ಗದರ್ಶನವಾಗಿವೆ ಎಂದು ಅವರು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಸುಭಾಷ್ ಪೂಜಾರ್ (ಖಜಾಂಜಿ), ರಾಮಾಂಜನಿ (ಉಪಾಧ್ಯಕ್ಷರು), ಚಂದ್ರಶೇಖರ್ (ಲೆಕ್ಕ ಪರಿಶೋಧಕರು), ಉಮೇಶ್ ಬಳೆಗಾರ, ಹನುಮಂತಪ್ಪ, ವೆಂಕಟೇಶ್ (ಫ್ಲೋರ್ ಮಿಲ್), ಶ್ರೀನಿವಾಸ್ (ತಾಲೂಕು ಆಸ್ಪತ್ರೆ) ಹಾಗೂ ಸಮಾಜದ ಮುಖಂಡರು ಮತ್ತು ತಾಲೂಕು ಕಚೇರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಅಡವೀಂದ್ರಸ್ವಾಮಿ ಮಠದ ಶಿವಾನುಭವದಲ್ಲಿ ಮಹಾಪುರುಷರ ಜಯಂತ್ಯುತ್ಸವ

# ಜನಪದ ಸಾಹಿತ್ಯ ಜೀವನ ಮೌಲ್ಯದ ಪ್ರತೀಕ

■ ವಿಜಯಸಾಕ್ಷಿ ಸುದ್ದಿ, ಗದಗ

ಜನಪದ ಸಾಹಿತ್ಯ ಜೀವನ ಮೌಲ್ಯ ಹಾಗೂ ಶ್ರಮ ಸಂಸ್ಕೃತಿಯ ಪ್ರತೀಕವಾಗಿ ಮೂಡಿ ಬಂದಿದ್ದು, ಮಾನವನ ಬದುಕಿನ ಪ್ರತಿಫಲವೇ ಜನಪದ. ಜನಪದ ನಡುವಳಿಕೆ ವಿವಿಧ ಆಚರಣೆ, ಸಂಪ್ರದಾಯಗಳು ಗಮನಾರ್ಹವಾಗಿರುತ್ತವೆ ಎಂದು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಖ್ಯಾತ ಜನಪದ ವಿದ್ವಾಂಸರಾದ ಹುಬ್ಬಳ್ಳಿಯ ಡಾ. ರಾಮು ಮೂಲಗಿ ಹೇಳಿದರು.

ನಗರದ ಮುಳುಗುಂದ ನಾಕಾದ ಹತ್ತಿರದ ಶ್ರೀಅಡವೀಂದ್ರ ಸ್ವಾಮಿ ಮಠದ ಶ್ರೀಅನ್ನಪೂರ್ಣೇಶ್ವರಿ ಮಂದಿರದಲ್ಲಿ ಏರ್ಪಡಿಸಿದ್ದ 345ನೇ ಮಾಸಿಕ ಶಿವಾನುಭವ ಹಾಗೂ ಜಗದ್ಗುರು ಶ್ರೀ ರೇಣುಕಾರ್ಯರ ಜಯಂತಿ ಮತ್ತು ತ್ರಿಭಾಷಾ ಕವಿ ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ ಜಯಂತಿ ಕಾರ್ಯಕ್ರಮದ ಮುಖ್ಯ ಅತಿಥಿ ಉಪನ್ಯಾಸಕರಾಗಿ ಅವರು ಮಾತನಾಡಿದರು.




ಯಾವ ಕೃತಕತೆ, ತೋರಿಕೆಗಳಿಗೂ ಆಸ್ಪದ ಕೊಡದೇ ಜನಪದರು ತಾವು ನಂಬಿದ ದೇವರು, ಕೃಷಿ ಕಾಯಕಕ್ಕೆ ಶ್ರದ್ಧಾ ಭಕ್ತಿಯಿಂದ ಮಣಿದು ಜನಪದ ಗೀತೆಗಳನ್ನು ಸೃಷ್ಟಿಸಿದ್ದಾರೆ. ಜನಪದಕ್ಕೆ ಸಂಬಂಧಿಸಿದ ಒಕ್ಕಲುತನ, ಹಬ್ಬ ಹರಿದಿನ, ಹರಕೆ, ಮದುವೆ ಸಂಪ್ರದಾಯಗಳ ಆಚರಣೆ, ನಂಬಿಕೆ, ಪೂಜೆ ಮಾಡಲಾದ ಸಮಸ್ತ ಜನಪದ ಸಂಸ್ಕೃತಿಯ ತಿಳುವಳಿಕೆಯೇ ಜನಪದವಾಗಿದೆ. ಜನಪದರ ಪ್ರತಿಯೊಂದು ಆಚರಣೆ, ವಿಧಿ-ವಿಧಾನಗಳಿಗೆ ತನ್ನದೇ ಆದ ಮಹತ್ವವಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶಿವಾನುಭವ ಸಮಿತಿಯ ಅಧ್ಯಕ್ಷ, ಹಿರಿಯ ಸಾಹಿತಿ ಡಾ. ರಾಜೇಂದ್ರ ಎಸ್. ಗಡಾದ ಮಾತನಾಡಿ, ಜನಪದ ಸಾಹಿತ್ಯ ಮಾನವೀಯ ಮೌಲ್ಯಗಳನ್ನು ಸಂಪ್ರದಾಯ, ನಂಬಿಕೆ, ಆಚರಣೆ ಹಾಗೂ ರೀತಿ-ನೀತಿಗಳನ್ನು ತಲೆತಲಾಂತರದಿಂದ ಉಳಿಸಿಕೊಂಡು ಬಂದಿರುವ ಸಾಹಿತ್ಯವಾಗಿದೆ. ನೀತಿ ಹಾಗೂ ಜೀವನ ಪ್ರೀತಿ, ದೈವಭಕ್ತಿ ಹಾಗೂ ಸಮಷ್ಠಿ ಹಿತ ಕಾಪಾಡುವ ಶಕ್ತಿ ಜನಪದ ಸಾಹಿತ್ಯಕ್ಕಿದೆ. ಜಗದ್ಗುರು ರೇಣುಕಾಚಾರ್ಯರು ಸಾವಿರ ವರ್ಷಗಳ ಹಿಂದೆಯೇ ನೀರಿನ ದಾನದ ಕುರಿತ ಹೇಳಿದ್ದು, ತುಂಬಾ ಮಹತ್ವದ ಸಂಗತಿಯಾಗಿದೆ. ನಾಡಿನ ಅಂಧ-ಅನಾಥರ, ಕಲಾವಿದರ ಬಂಧುವಾದ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ ಸೇವೆ ಅನುಪಮವಾಗಿದ್ದು, ಅವರೊಬ್ಬ ವ್ಯಕ್ತಿಯಲ್ಲ, ಶಕ್ತಿಯಾಗಿದ್ದರು ಎಂದು ಹೇಳಿದರು. ಸಮ್ಮುಖ ವಹಿಸಿದ್ದ ಶ್ರೀ ಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿಗಳಾದ ವೇದಮೂರ್ತಿ ಮಹೇಶ್ವರ ಸ್ವಾಮಿಗಳು ಮಾತನಾಡಿ, ಬೆಂಗಳೂರಿನಲ್ಲಿ ಜರುಗಿದ ಶ್ರೀರಂಭಾಪುರಿ ಜಗದ್ಗುರುಗಳ ದಸರಾ ದರ್ಬಾರ್ ಕಾರ್ಯಕ್ರಮಗಳ ಪ್ರಸಂಗಗಳನ್ನು ಹಂಚಿಕೊಂಡರು.

ಇದೇ ಸಂದರ್ಭದಲ್ಲಿ ಇತ್ತೀಚೆಗೆ ಸೇವೆಯಿಂದ ನಿವೃತ್ತರಾದ ರಾಮಪ್ಪ ಕಾಶಪ್ಪನವರ ಅವರನ್ನು ಸನ್ಮಾನಿಸಲಾಯಿತು. ಭಕ್ತಿಸೇವೆ ವಹಿಸಿಕೊಂಡಿದ್ದ ಡಿ.ಜಿ.ಎಂ. ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ನಿವೃತ್ತ ಪ್ರಾಚಾರ್ಯ ಡಾ. ಜಿ.ಎಸ್. ಹಿರೇಮಠ, ಪ್ರಧಾನ ಗುರುಗಳಾದ ಎಂ.ಎಂ. ಜೋಗಿನ, ಗುರಪ್ಪ ನಿಡಗುಂದಿ, ಮಂಜುನಾಥ ಗಾಂಜಿ ವೇದಿಕೆಯಲ್ಲಿದ್ದರು.

ಆರಂಭದಲ್ಲಿ ಶ್ರೀಮಠದ ವಟುಗಳಿಂದ ವೇದಘೋಷ ಜರುಗಿ-ತು. ಶಿವಾನುಭವ ಸಮಿತಿಯ ಪ್ರಧಾನ ಕಾರ್ಯದರ್ಶಿ ಪ್ರಭುಗೌಡ ಪಾಟೀಲ ಸ್ವಾಗತಿಸಿದರು. ಕೋಶಾಧ್ಯಕ್ಷ ಸಿದ್ದಣ್ಣ ಜವಳಿ ಪರಿಚಯಿಸಿದರು. ಪ್ರಕಾಶ ಬಂಡಿ ಕಾರ್ಯಕ್ರಮ ನಿರೂಪಿಸಿದರು. ಎಂ.ಎಂ. ಜೋಗಿನ ವಂದಿಸಿದರು.

> ಸಾನ್ನಿಧ್ಯ ವಹಿಸಿದ್ದ ಕದಾಂಪುರ-ನರಸಾಪುರ ಹಿರೇಮಠದ ಡಾ. ವೀರಭದ್ರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಹೋಳಿ ಹುಣ್ಣಿಮೆಗೆ ಚಾರಿತ್ರಿಕ ಇತಿಹಾಸವಿದ್ದು, ಇದೊಂದು ಭಾವನೆಗಳನ್ನು ಬೆಸೆಯುವ ಹಬ್ಬವಾಗಿದೆ. ಹೋಳಿ ಹುಣ್ಣಿಮೆಯಲ್ಲಿ ಬಣ್ಣಕ್ಕೆ ಎಷ್ಟು ಮಹತ್ವವಿದೆಯೋ, ಅಷ್ಟೇ ಮಹತ್ವ ಅಂದು ತಿನ್ನುವ ಹೋಳಿಗೆಗೂ ಇದೆ ಎಂದರು.

# ಸಾಧಕಿಯರ ಸಾಧನೆ ಯುವತಿಯರಿಗೆ ಪ್ರೇರಣೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯಾವುದೇ ವ್ಯಕ್ತಿ ಸಾಧನೆ ಮಾಡಬೇಕಾದರೆ ಅದರ ಹಿಂದೆ ಅನೇಕ ಕಷ್ಟಗಳು ಎದ್ದು ಕಾಣುತ್ತವೆ. ಅದರಲ್ಲಿ ಕನ್ನಡ ನಾಡಿನ ಸಾಧಕಿಯರ ಜೀವನ ಮತ್ತು ಕಠಿಣ ಪರಿಶ್ರಮವು ಕೇವಲ ಅವರ ಸಾಧನೆಯಲ್ಲ, ಬದಲಾಗಿ ಯುವ ಪೀಳಿಗೆಗೆ, ವಿಶೇಷವಾಗಿ ಯುವತಿಯರಿಗೆ ತಮ್ಮ ಕನಸುಗಳನ್ನು ನನಸಾಗಿಸಿಕೊಳ್ಳಲು ದೊಡ್ಡ ಪ್ರೇರಣೆಯಾಗಿದೆ ಎಂದು ಕನ್ನಡ ಉಪನ್ಯಾಸಕಿ ಅಮೃತಾ ಗುಡಗೇರಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ರಾಜರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ವತಿಯಿಂದ ಹಮ್ಮಿಕೊಂಡ ಕನ್ನಡ ನಾಡಿನ ಅನನ್ಯ ಸಾಧಕಿಯರು ಕುರಿತ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಿತ್ತೂರು ರಾಣಿ ಚೆನ್ನಮ್ಮರಂತಹ ಐತಿಹಾಸಿಕ ನಾಯಕಿಯರಿಂದ ಹಿಡಿದು, ಪರಿಸರ ಕ್ಷೇತ್ರದಲ್ಲಿ ಸಾಲುಮರದ ತಿಮ್ಮಕ್ಕ, ತುಳಸಿ ಗೌಡ, ಆರೋಗ್ಯ ಸೇವೆಯಲ್ಲಿ ಸೂಲಗಿತ್ತಿ ನರಸಮ್ಮ, ಸಾಹಿತ್ಯ ಮತ್ತು ಸಮಾಜ ಸೇವೆಯಲ್ಲಿ ಸುಧಾ ಮೂರ್ತಿಯವರಂತಹ ಮಹಿಳೆಯರು ದೇಶದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ರುಕ್ಮಿಣಿಬಾಯಿ ಪೂಜಾರ ಮಾತನಾಡಿ, ಕೇವಲ ಮನೆಗೆ ಸೀಮಿತವಾಗಿದ್ದ ಮಹಿಳೆ ಇಂದು ಜಗತ್ತಿನ ಯಾವುದೇ ಕ್ಷೇತ್ರದಲ್ಲಿ ಪುರುಷರಿಗೆ ಸಮಾನವಾಗಿ, ಅಥವಾ ಅವರಿಗಿಂತ ಹೆಚ್ಚಾಗಿ ಸಾಧನೆ ಮಾಡಬಲ್ಲಳು ಎಂಬುದನ್ನು ಸಾಬೀತುಪಡಿಸಿದ್ದಾಳೆ ಎಂದರು.

ಸಮಾರಂಭದಲ್ಲಿ ವೇದಿಕೆಯ ಅಧ್ಯಕ್ಷೆ ಹಿರಿಯ ಸಾಹಿತಿ ಲಲಿತಾ ಕೆರಿಮನಿ, ಮಾಲಾದೇವಿ ದಂಧರಗಿ, ಲಕ್ಷ್ಮವ್ವ ಆಚಾರಿ, ವಿಜಯಲಕ್ಷ್ಮಿ ಬಾಳಿಕಾಯಿ, ನಿರ್ಮಲಾ ಅರಳಿ, ಪ್ರತಿಮಾ ಮಹಾಜನಶೆಟ್ಟರ, ಸಾವಿತ್ರಿಬಾಯಿ ಗುಡಿಗೇರಿ, ಜಯಶ್ರೀ ಮತ್ತಿಕಟ್ಟಿ, ಅಕ್ಕಮಹಾದೇವಿ ಮಳಲಿ, ಲತಾ ತಟ್ಟಿ ಕಾಂಚನಮಾಲಾ ಹಸರೆಡ್ಡಿ, ಸೋಮಕ್ಕ ಪಾಟೀಲ್, ಮಲ್ಲವ್ವ ಹಂಚಿನಾಳ, ದ್ರಾಕ್ಷಾಯಿಣಿ ಗಂಟಾಮಠ ಮುಂತಾದವರು ಉಪಸ್ಥಿತರಿದ್ದರು. ಶಿಲ್ಪಾ ಯಾಳಗಿ ಗೌರಾ ಸಂಗಪ್ಪಶೆಟ್ಟರ್, ಅಂಕಿತಾ ಅರಳಿ, ನಂದಿತಾ ಮಾಳವಾಡ ಕಾರ್ಯಕ್ರಮ ನಿರ್ವಹಿಸಿದರು.

# ಹೇಮಾವತಿ ಸಂಪರ್ಕ ಕಾಲುವೆ ಯೋಜನೆ ನಿಲ್ಲಿಸುವ ಪ್ರಶ್ನೆಯೇ ಇಲ್ಲ: ಡಿಕೆಶಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹೇಮಾವತಿ ಸಂಪರ್ಕ ಕಾಲುವೆ ಯೋಜನೆಯನ್ನು ಯಾರಿಂದಲೂ ನಿಲ್ಲಿಸಲು ಸಾಧ್ಯವಿಲ್ಲ ಎಂದು ಡಿಸಿಎಂ ಡಿಕೆ ಶಿವಕುಮಾರ್ ಸ್ಪಷ್ಟಪಡಿಸಿದರು.

ಮಾಗಡಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೆಲವರು ಕೇಳಿದ ಹಿನ್ನೆಲೆಯಲ್ಲಿ ಅನುದಾನ ನೀಡಲಾಗಿದೆ. ಕಾಮಗಾರಿ ಈಗಾಗಲೇ ಪ್ರಗತಿಯಲ್ಲಿದ್ದು, ತಲೆಕೆಡಿಸಿಕೊಳ್ಳುವ ಅಗತ್ಯವಿಲ್ಲ ಎಂದು ಹೇಳಿದರು.

ಸತ್ತೇಗಾಲದಿಂದ ನೀರು ಬರುವ ಸಮಯದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಕಾಲುವೆ ಕಾಮಗಾರಿ ನಡೆಯುತ್ತಿದೆ. ತಾವು ಸ್ವತಃ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದೇನೆ. ಕೆಲಸ ಪೂರ್ಣಗೊಳ್ಳಲಿದೆ ಎಂದು ಭರವಸೆ ನೀಡಿದರು.

ವಿದೇಶ ಪ್ರವಾಸದಿಂದ ವಾಪಸ್ಸಾದ ಶಾಸಕರು ಭೇಟಿಯಾಗಿರುವ ಕುರಿತು



ಪ್ರತಿಕ್ರಿಯಿಸಿದ ಅವರು, ಹಲವರು ಭೇಟಿ ಮಾಡಿ ಪ್ರವಾಸದಲ್ಲಿ ಕಂಡ ಅನುಭವಗಳನ್ನು ಹಂಚಿಕೊಳ್ಳುತ್ತಿದ್ದಾರೆ ಎಂದು ತಿಳಿಸಿದರು.

ಬಜೆಟ್ ಕುರಿತು ಪ್ರಶ್ನಿಸಿದಾಗ, ನಮ್ಮ ಜಿಲ್ಲೆಯ ಅಭಿವೃದ್ಧಿ ಕೆಲಸಗಳು ಬಜೆಟ್ ಮೇಲೆ ಅವಲಂಬಿತವಾಗಿಲ್ಲ. ಪೆನ್ನು-ಕಾಗದ ನನ್ನ ಕೈಯಲ್ಲಿದೆ. ಬಜೆಟ್ ಇರಲಿ, ಇಲ್ಲದಿರಲಿ ಜಿಲ್ಲೆಯ ಕೆಲಸಗಳು ಮುಂದುವರಿಯುತ್ತವೆ ಎಂದು ಆತ್ಮವಿಶ್ವಾಸ ವ್ಯಕ್ತಪಡಿಸಿದರು. ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಪ್ರತಿ ಶಾಲೆಗೆ 15 ಕೋಟಿ ರೂ. ವೆಚ್ಚದಲ್ಲಿ 25 ಕೆಪಿಎಸ್ ಶಾಲೆಗಳು ನಿರ್ಮಾಣವಾಗುತ್ತಿವೆ. ಈ ಯೋಜನೆಯನ್ನು ನಾವು ಬಜೆಟ್‌ನಲ್ಲಿ ಸೇರಿಸಿಲ್ಲ. ರಾಜ್ಯದಾದ್ಯಂತ 2 ಸಾವಿರ ಶಾಲೆ ನಿರ್ಮಾಣ ಗುರಿ ಹೊಂದಿದ್ದೇವೆ ಎಂದು ತಿಳಿಸಿದರು.

ಹಿಂದಿನ ಮೈತ್ರಿ ಸರ್ಕಾರದ ಅವಧಿಯಲ್ಲಿ ಕನಕಪುರಕ್ಕೆ ವೈದ್ಯಕೀಯ ಮಹಾವಿದ್ಯಾಲಯ ಮಂಜೂರು ಮಾಡಲಾಗಿತ್ತು. ನಂತರದ ಸರ್ಕಾರ ಅದನ್ನು ಚಿಕ್ಕಬಳ್ಳಾಪುರಕ್ಕೆ ವರ್ಗಾಯಿಸಿತು. ಈಗ ರಾಮನಗರ ಹಾಗೂ ಕನಕಪುರ ತಾಲ್ಲೂಕುಗಳಿಗೆ ವೈದ್ಯಕೀಯ ಮಹಾವಿದ್ಯಾಲಯ ನೀಡಿದ್ದೇವೆ. ಚನ್ನಪಟ್ಟಣದಲ್ಲೂ ಖಾಸಗಿ ವೈದ್ಯಕೀಯ ಮಹಾವಿದ್ಯಾಲಯಕ್ಕೆ ಅನುಮತಿ ನೀಡಲಾಗಿದೆ. ಕನಕಪುರ ಮತ್ತು ರಾಮನಗರ ನಡುವಿನ ದಯಾನಂದ ಸಾಗರ್ ವೈದ್ಯಕೀಯ ಮಹಾವಿದ್ಯಾಲಯವೂ ಕಾರ್ಯನಿರ್ವಹಿಸುತ್ತಿದೆ. ಮುಂದಿನ ದಿನಗಳಲ್ಲಿ ಮಾಗಡಿ ಕ್ಷೇತ್ರದ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

# ಯಂತ್ರಚಾಲಿತ ತ್ರಿಚಕ್ರ ವಾಹನಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಜಯಸಾಕ್ಷಿ ಸುದ್ದಿ, ಗದಗ 2025-26ನೇ ಸಾಲಿನ ಜಿಲ್ಲಾ ಪಂಚಾಯಿತಿ ಅನಿರ್ಬಂಧಿತ ಅನುದಾನದಲ್ಲಿ ವಿಕಲಚೇತನರಿಗೆ ಉಚಿತ ಯಂತ್ರಚಾಲಿತ ತ್ರಿಚಕ್ರ ವಾಹನಗಳನ್ನು ವಿತರಿಸಲು ಗದಗ ಜಿಲ್ಲೆಯ ಅರ್ಹ ವಿಕಲಚೇತನರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಮಾರ್ಚ್ 09ರೊಳಗಾಗಿ ಸಲ್ಲಿಸಬೇಕು. ಅವಧಿ ಮೀರಿ ಬಂದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲ.

**ಅರ್ಹತೆಗಳು:** ಅರ್ಜಿದಾರರ ವಯಸ್ಸು 20 ರಿಂದ 60 ವರ್ಷದೊಳಗಿರಬೇಕು. ಯು.ಡಿ.ಐ.ಡಿ. ಕಾರ್ಡ್‌ನಲ್ಲಿ ಶೇ. 75% ಅಥವಾ ಅದಕ್ಕಿಂತ ಹೆಚ್ಚು ದೈಹಿಕ ವಿಕಲತೆ ಹೊಂದಿರಬೇಕು. ವಾರ್ಷಿಕ ಆದಾಯ ರೂ. 2,00,000/- ಒಳಗಿರಬೇಕು.

**ಲಗತ್ತಿಸಬೇಕಾದ ದಾಖಲಾತಿಗಳು:** ನಿಗದಿತ ಅರ್ಜಿ ನಮೂನೆ, ಅಂಗವಿಕಲತೆ ಸ್ಪಷ್ಟವಾಗಿ ಕಾಣುವ 6 ಫೋಟೋಗಳು, ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆನ್‌ಲೈನ್ ನಿವಾಸಿ (ವಾಸಸ್ಥಳ) ಪ್ರಮಾಣ ಪತ್ರ, ಸ್ಥಳೀಯ ಸಂಸ್ಥೆಗಳಿಂದ (ಗ್ರಾಮ ಪಂಚಾಯಿತಿ/ಪಟ್ಟಣ ಪಂಚಾಯಿತಿ/ಪುರಸಭೆ/ನಗರಸಭೆ) ಈ ಮೊದಲು ಯಂತ್ರಚಾಲಿತ ತ್ರಿಚಕ್ರ ವಾಹನ ಪಡೆದಿಲ್ಲವೆಂಬ ದೃಢೀಕರಣ ಪತ್ರ, ಸಾರಿಗೆ ಇಲಾಖೆಯಿಂದ ಪಡೆದ ಕಲಿಕಾ ಪ್ರಮಾಣ ಪತ್ರ ಅಥವಾ ವಾಹನ ಚಾಲನಾ ಪರವಾನಗಿ ಹಾಗೂ ಸ್ವಯಂ ಉದ್ಯೋಗ/ವ್ಯಾಸಂಗ/ಕರ್ತವ್ಯ ನಿರ್ವಹಣೆ ಕುರಿತು ಸಂಸ್ಥೆಯ ದೃಢೀಕರಣ ಪತ್ರ ಹಾಗೂ ರೂ.100/- ಮುಖಬೆಲೆಯ ಸ್ಟ್ಯಾಂಪ್ ಪೇಪರ್ ಮೇಲೆ ಈ ಹಿಂದೆ ಯಾವುದೇ ಮೂಲದಿಂದ ವಾಹನ ಪಡೆದಿಲ್ಲವೆಂಬ ಅಫಿಡವಿಟ್

ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ ಹಾಗೂ ರೇಷನ್ ಕಾರ್ಡ್ ಪ್ರತಿ ವಿ.ಆರ್.ಡಬ್ಲ್ಯೂ, ಯು.ಆರ್.ಡಬ್ಲ್ಯೂ ಹಾಗೂ ಎಮ್.ಆರ್.ಡಬ್ಲ್ಯೂಗಳಿಂದ ಈ ಹಿಂದೆ ಯಾವುದೇ ಮೂಲದಿಂದ ವಾಹನ ಪಡೆದಿಲ್ಲವೆಂಬ ದೃಢೀಕರಣ ಪತ್ರ.

ಹೆಚ್ಚಿನ ಮಾಹಿತಿಗಾಗಿ ಹಾಗೂ ಅರ್ಜಿ ನಮೂನೆಗಾಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕೊಠಡಿ ಸಂಖ್ಯೆ: 029 (ನೆಲಮಹಡಿ), ಜಿಲ್ಲಾಡಳಿತ ಭವನ, ಗದಗ ಕಚೇರಿಯನ್ನು ಖುದ್ದಾಗಿ ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ: 08372-220419.ಈ ಕುರಿತು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೋಬಳಿಯಾದ್ಯಂತ ಸಂಭ್ರಮದ ಹೋಳಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಡಂಬಳ

ಹೋಬಳಿಯ ಕೆಲ ಗ್ರಾಮಗಳಲ್ಲಿ ಬುಧವಾರ ಸಂಭ್ರಮದ ಹೋಳಿ ಹಬ್ಬ ಆಚರಿಸಲಾಯಿತು. ವಿವಿಧ ದೇವಾಲಯಗಳಲ್ಲಿ ಹೋಳಿ ಹಬ್ಬದ ಅಂಗವಾಗಿ ವಿಶೇಷ ಪೂಜೆ ಜರುಗಿದವು.

ಡಂಬಳ ಗ್ರಾಮ ಸೇರಿದಂತೆ ಕೆಲ ಗ್ರಾಮಗಳಲ್ಲಿ ಮಂಗಳವಾರ ರಾತ್ರಿ ಸಂಪ್ರದಾಯದಂತೆ ಕಾಮದಹನ ಮಾಡಿದರು. ಬೆಳಗಾಗುತ್ತಿದ್ದಂತೆ ಮಕ್ಕಳು, ಯುವಕರು, ವಯಸ್ಕರು ಕಾಮದಹನದ ಕಿಚ್ಚನ್ನು ಮನೆಗಳಿಗೆ ತೆಗೆದುಕೊಂಡು ಹೋಗಿ ಮನೆಯ ಅಂಗಳದಲ್ಲಿ ಹೆಂಚುಗಳ ಮೂಲಕ ಕಡಲೆಕಾಳು, ಹೆಸರು ಕಾಳು, ಶೇಂಗಾ ಕಾಳುಗಳನ್ನು ಹುರಿದು ಸವಿದರು.

ವಯಸ್ಕರು, ಮಹಿಳೆಯರು ಕೂಡಾ ವಯಸ್ಸಿನ ಹಂಗು ತೊ-ರೆದು ಹೋಳಿ ಹಬ್ಬದ ಅಖಾಡಕ್ಕೆ ಇಳಿದರು. ಕೆಲ ಯುವಕರು ಹಲಗೆ ಬಾರಿಸುತ್ತಾ, ಡ್ಯಾನ್ಸ್ ಮಾಡುತ್ತಾ ಗ್ರಾಮೀಣ ಪ್ರದೇಶದ ಪ್ರಮುಖ ಬೀದಿಗಳಲ್ಲಿ ಹಾಯ್ದು ಹೋಗುವ ಜನರಿಗೆ ಗುಲಾಲ್ ಎರಚುತ್ತಾ ಮೆರವಣಿಗೆ ಮುಖಾಂತರ ಸಾಗುತ್ತಿದ್ದ ದೃಶ್ಯಗಳು ಕಂಡುಬಂದವು.

ಕೆಲ ಯುವಕರು ಮನೆ ಮುಂಭಾಗದಲ್ಲಿ ನೀರನ್ನು ತುಂಬಿ ಇರಿಸಲಾಗಿದ್ದ ಬ್ಯಾರೇಲ್ ಒಳಗೆ ಬಣ್ಣಗಳನ್ನು ಹರಿದು ಹಾಕಿ ಸಂಪೂರ್ಣ ಮಿಶ್ರಣ ಮಾಡಿ ಬಕೆಟ್‌ಗಳಲ್ಲಿ ತೆಗೆದುಕೊಂಡು ಹೋಗಿ ಸುರಿಯುತ್ತಿದ್ದ ದೃಶ್ಯಗಳು ಕಂಡುಬಂದವು.

ಸಂಭ್ರಮದ ಸಂಕೇತವಾಗಿರುವ ಹೋಳಿಬದುಕಿನಲ್ಲಿ ಹೊಸ ಆಶಯಗಳಿಗೆ ಪೂರಕವಾಗಿ ಉನ್ನತ ಚಿಂತನೆಗಳು ಮೂಡುವಂತೆ ಮಾಡಲಿ ಎಂಬ ಆಶಯದೊಂದಿಗೆ ಬಣ್ಣದೋಕುಳಿ ಎರಚಿ ಸಂಭ್ರಮಿಸಿದರು. ದೇಶದ ಜನರು ಪರಸ್ಪರ ಭ್ರಾತೃತ್ವ ಧೋರಣೆಯಿಂದ ಸುಖ, ಶಾಂತಿ, ನೆಮ್ಮದಿಯಿಂದ ಬಾಳುವಂತಾಗಲಿ ಎಂಬ ಮಹತ್ವಾಕಾಂಕ್ಷೆ ಈ ಹೋಳಿ ಹಬ್ಬದ್ದು. ಕಾಲೇಜು ವಿದ್ಯಾರ್ಥಿಗಳು, ಕಾರ್ಮಿಕರು, ಸಾರ್ವಜನಿಕರು, ವಿಶೇಷವಾಗಿ ಪುಟಾಣಿ ಮಕ್ಕಳು ಕೂಡಾ ಹೋಳಿ ಬಣ್ಣದಾಟದಲ್ಲಿ ತೊಡಗಿದ್ದ ದೃಶ್ಯ ಎಲ್ಲೆಡೆ ಸಾಮಾನ್ಯವಾಗಿತ್ತು.

# ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮನವಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಹಾಗೂ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘ ಲಕ್ಷ್ಮೇಶ್ವರ ತಾಲೂಕು ಘಟಕದಿಂದ ಬುಧವಾರ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ತಹಸೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ಮನವಿ ಪತ್ರದ ಮೂಲಕ ತಾಲೂಕಿನಲ್ಲಿ 50 ವರ್ಷ ಮೇಲ್ಪಟ್ಟ ಶಿಕ್ಷಕಿಯರಿಗೆ ಹಾಗೂ 55 ವರ್ಷ ಮೇಲ್ಪಟ್ಟ ಶಿಕ್ಷಕರಿಗೆ ಮತ್ತು ಗರ್ಭಿಣಿ ಸ್ತ್ರೀಯರಿಗೆ, ಒಂದು ವರ್ಷ ಮಗು ಇರುವ ಶಿಕ್ಷಕಿಯರಿಗೆ, ಕಾಯಿಲೆಯಿಂದ ಬಳಲುತ್ತಿರುವ ಶಿಕ್ಷಕರಿಗೆ, ಬಿಎಲ್‌ಓ ಕೆಲಸ ಮಾಡುತ್ತಿರುವ ಶಿಕ್ಷಕರಿಗೆ, ಈಗಾಗಲೇ ಬೇರೆ ತಾಲೂಕಿಗೆ ವರ್ಗಾವಣೆ ಹೊಂದಿದ ಶಿಕ್ಷಕರಿಗೆ, ಮುಖ್ಯ ಶಿಕ್ಷಕರಿಗೆ ಜನಗಣತಿ ಹಾಗೂ ಮನೆ ಪಟ್ಟಿ ಕಾರ್ಯದಿಂದ ವಿನಾಯತಿ ನೀಡುವಂತೆ ಮನವಿ ಮಾಡಿಕೊಳ್ಳಲಾಯಿತು.

ತಹಸೀಲ್ದಾರ ಧನಂಜಯ ಎಂ ಮನವಿ ಸ್ವೀಕರಿಸಿದರು.

ಈ ವೇಳೆ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ್ ಹರ್ಲಾಪುರ, ಕಾರ್ಯದರ್ಶಿ ಚಂದ್ರಕಾಂತ ನೇಕಾರ, ಬಸವರಾಜ ಎತ್ತಿನಹಳ್ಳಿ ನೌಕರರ ಸಂಘದ ಅಧ್ಯಕ್ಷ ಗುರುರಾಜ ಹವಳದ, ಕಾರ್ಯದರ್ಶಿ ಎಂ.ಎ. ನದಾಫ್, ಎಂ.ಡಿ. ವಾರದ, ಎಂ.ಎಸ್. ಹಿರೇಮಠ, ಜಿ.ಎನ್. ಶೀರನಹಳ್ಳಿ, ಎಸ್.ಎನ್. ತಾಯಮ್ಮನವರ, ಎಸ್.ಎನ್. ಕ್ಷತ್ರಿಯ, ಎ.ಎಂ. ಗುತ್ತಲ, ಡಿ.ಎನ್. ದೊಡ್ಡಮನಿ, ಅಶೋಕ ಸರವಿ ಉಪಸ್ಥಿತರಿದ್ದರು.

## ವಿದೇಶಿ ಪ್ರವಾಸಿಗರ ಮಾಹಿತಿ ನೀಡದೆ ನಿಯಮ ಉಲ್ಲಂಘನೆ: ಗೋಕರ್ಣ ಹೋಂಸ್ಟೇ ಮಾಲೀಕರ ವಿರುದ್ಧ FIR!

■ ವಿಜಯಸಾಕ್ಷಿ ಸುದ್ದಿ, ಕಾರವಾರ

ವಿದೇಶಿ ಪ್ರವಾಸಿಗರು ಹೋಂಸ್ಟೇನಲ್ಲಿ ತಂಗಿರುವ ಬಗ್ಗೆ ಕಡ್ಡಾಯ ಮಾಹಿತಿ ನೀಡದೇ ನಿಯಮ ಉಲ್ಲಂಘಿಸಿರುವ ಆರೋಪದ ಮೇರೆಗೆ ಗೋಕರ್ಣದಲ್ಲಿ ಪೊಲೀಸರು ಹೋಂಸ್ಟೇ ಮಾಲೀಕರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

ಗೋಕರ್ಣದ ಭೀಮಕೊಂಡದಲ್ಲಿರುವ 'ವೈಲ್ಡ್ ವಿಲೇಜ್' ಹೋಂಸ್ಟೇ ಮಾಲೀಕ ಸೋಮಾ ಗಣಪು ಗೌಡ ಹಾಗೂ ವ್ಯವಸ್ಥಾಪಕ ಗಣೇಶ ಸೋಮಾ ಗೌಡ ವಿರುದ್ಧ ಪ್ರಕರಣ ದಾಖಲಾಗಿದೆ.

ಅರ್ಜೆಂಟೈನಾದ ಪ್ರವಾಸಿಗರಾದ ಸ್ಯಾಂಟಿಗೋ ಆಸ್ಕರ್ ಲ್ಯುಕೆ ಮೆರ್ಲೊ ಮತ್ತು ಅವರ ತಾಯಿ ಕಳೆದ ಎರಡು ದಿನಗಳಿಂದ ಹೋಂಸ್ಟೇನಲ್ಲಿ ತಂಗಿದ್ದರು ಎಂದು ತಿಳಿದುಬಂದಿದೆ. ವಿದೇಶಿ ಪ್ರಜೆಗಳು ತಂಗಿದಲ್ಲಿ, ಸಂಬಂಧಿತ ಮಾಹಿತಿಯನ್ನು 'ಸಿ' ಫಾರ್ಮ್ ಮೂಲಕ ಪೊಲೀಸ್ ಠಾಣೆಗೆ ಸಲ್ಲಿಸುವುದು ಕಡ್ಡಾಯವಾಗಿದೆ. ಆದರೆ ಈ ನಿಯಮವನ್ನು ಪಾಲಿಸದೆ ವಿದೇಶಿ ಪ್ರಜೆಗಳಿಗೆ ವಸತಿ ನೀಡಲಾಗಿದೆ ಎಂಬ ಆರೋಪ ಕೇಳಿಬಂದಿದೆ.

ಈ ಹಿನ್ನಲೆಯಲ್ಲಿ ಗೋಕರ್ಣ ಪೊಲೀಸ್ ಠಾಣೆಯಲ್ಲಿ ಇಮಿಗ್ರೇಶನ್ ಮತ್ತು ಫಾರಿನರ್ಸ್ ಕಾಯ್ದೆಯಡಿ ಪ್ರಕರಣ ದಾಖಲಾಗಿದ್ದು, ಠಾಣೆಯ ಪಿಎಸ್‌ಐ ಬಿ.ಎಂ. ಅನಿಲ್ ತನಿಖೆ ಕೈಗೊಂಡಿದ್ದಾರೆ.

## ನಿಧನ

### ಶಾಂತಬಾಯಿ ಬಿರಾದಾರ



**ಲಕ್ಕುಂಡಿ:** ಇಲ್ಲಿಯ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಬಳಿಯ ನಿವಾಸಿ ಶಾಂತಾಬಾಯಿ ಅಪ್ಪಾರಾವ್ ಬಿರಾದಾರ (70) ಬುಧವಾರ ನಿಧನರಾದರು. ಮೃತರು ಪತಿ, ಇಬ್ಬರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

### ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸಂಗೀತ ಜೀವನದ ಅವಿಭಾಜ್ಯ ಅಂಗ





**■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ನೊಂದ ಮನಕ್ಕೆ ಶಾಂತಿ, ನೆಮ್ಮದಿ ನೀಡುವ ಶಕ್ತಿ ಸಂಗೀತಕ್ಕಿದೆ. ಸಂಗೀತ ಜೀವನದ ಒಂದು ಅವಿಭಾಜ್ಯ ಅಂಗವಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ 'ಸಂಗೀತ ಸೌರಭ' ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಗದುಗಿನ ಖ್ಯಾತ ಗಾಯಕ ಪಂ. ಡಾ. ರಾಜಗುರು ಗುರುಸ್ವಾಮಿ ಕಲಕೇರಿ ಮತ್ತು ಸಂಗಡಿಗರು ಒಂದು ಗಂಟೆಗಳ ಕಾಲ ತಮ್ಮ ಸುಶ್ರಾವ್ಯ ಸಂಗೀತದ ಮೂಲಕ ಜನಮನವನ್ನು ಸೂರೆಗೊಂಡರು.

ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು ಸಮಾರಂಭವನ್ನು ಉದ್ಘಾಟಿಸಿದರು. ಜಿಲ್ಲಾ ಪಂಚಾಯತ ಮಾಜಿ ಉಪಾಧ್ಯಕ್ಷ ಎಂ.ಎಸ್. ಚನ್ನಕೇಶವ, ಕಾಂಗ್ರೆಸ್ ಧುರೀಣರಾದ ಬಿ.ಸಿ. ಗೀತಾ ಯಡ್ರಾಮಿಯ, ಚಂದ್ರಶೇಖರ ಪುರಾಣಿಕ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ಸಿಂದಗಿ, ಎಡೆಯೂರು, ಆವರಗೊಳ್ಳ, ರಾಯಚೂರು ಕಿಲ್ಲೆ ಬೃಹನ್ಮಠ, ಹೊನ್ನಕಿರಣಗಿ, ಶ್ರೀನಿವಾಸ ಸರಡಗಿ, ಸ್ಟೇಶನ್ ಬಬಲಾದ, ಹರಪನಹಳ್ಳಿ, ಮಳಲಿ, ಶಿವಗಂಗಾ, ತಾವರೆಕೆರೆ, ಬೀರೂರು, ಬಿಳಿಕಿ, ತಡವಲಗಾ, ಕೆಂಭಾವಿ, ಉದ್ಗಿರಿ, ನಂಜನಗೂಡು, ಮಾನಿಹಳ್ಳಿ, ಅಚಲೇರಿ, ಹಣ್ಣೆಮಠ, ಕಲ್ಬಾಳು, ನಾಗಲಾಪುರ, ರಾಜಾಪುರ, ಚನ್ನಗಿರಿ, ಹಾರನಹಳ್ಳಿ, ಹುಡುಗಿ ಮಠಗಳ ಮಠಾಧೀಶರು ಉಪಸ್ಥಿತರಿದ್ದರು.

ಬಾಳೆಹೊನ್ನೂರು ಆರ್.ಡಿ. ಮಹೇಂದ್ರ ಸ್ವಾಗತಿಸಿದರು. ಹಂಪಸಾಗರ ನವಲಿ ಹಿರೇಮಠದ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು. ಗುರುಲಿಂಗಯ್ಯ ಹಿತ್ತಲಶಿರೂರು ಇವರಿಂದ ಪ್ರಾರ್ಥನೆ ಜರುಗಿತು.

ಹಿಂದೂಸ್ತಾನಿ ಸಂಗೀತವೇ ಇರಬಹುದು, ಕರ್ನಾಟಕ ಶಾಸ್ತ್ರೀಯ ಸಂಗೀತವೇ ಇರಬಹುದು ಕಿವಿಗೆ ಇಂಪನ್ನು, ಮನಸ್ಸಿಗೆ ಮುದವನ್ನು ನೀಡುವ ಶಕ್ತಿ ಹೊಂದಿವೆ. ಸಂಗೀತವನ್ನು ಕೇಳಿದ ಸಸ್ಯಗಳು ಸೊಂಪಾಗಿ ಬೆಳೆಯುತ್ತವೆ ಎಂದು ವಿಜ್ಞಾನಿಗಳು ಪ್ರಯೋಗಗಳ ಮೂಲಕ ಕಂಡುಕೊಂಡಿದ್ದಾರೆ. ಭಕ್ತಿ ಗೀತೆಗಳನ್ನು ಕೇಳಿದಾಗ ಅವ್ಯಕ್ತ ಭಕ್ತಿಯ ಭಾವನೆ ಉಂಟಾಗುವುದು ನಮ್ಮೆಲ್ಲರ ಗಮನಕ್ಕೆ ಬಂದ ವಿಷಯವಾಗಿದೆ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

## ಅನುಕಂಪದ ಆಧಾರದಲ್ಲಿ ಗ್ರಾಮ ಸಹಾಯಕರ ನೇಮಕ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಹುಲ್ಲೂರು ಗ್ರಾಮದ ಗ್ರಾಮ ಸಹಾಯಕನಾಗಿ ಸೇವೆ ಸಲ್ಲಿಸುತ್ತಿದ್ದ ಮಹಮ್ಮದ್‌ರಫೀಕ್ ಹುಸೇನ್‌ಸಾಬ್ ನದಾಫ್ ಇವರು 2025ರ 15ರಂದು ಮರಣ ಹೊಂದಿದ್ದರು. ಈ ಹಿನ್ನೆಲೆಯಲ್ಲಿ ಮೃತ ಯುವಕನ ತಂಗಿ ಅಮೀನಾಬೇಗಂ ಹುಸೇನ್‌ಸಾಬ್ ನದಾಫ್ ಅವರನ್ನು ಗ್ರಾಮ ಸಹಾಯಕರನ್ನಾಗಿ ನೇಮಕ ಮಾಡಿದ ಆದೇಶವನ್ನು ಬುಧವಾರ ತಹಸೀಲ್ದಾರ ಎಂ. ಧನಂಜಯ ನೀಡಿದರು.

ಮೃತನ ಕುಟುಂಬಸ್ಥರಿಗೆ ಕೆಲಸ ಕೊಡಬೇಕು ಎಂದು ಕಂದಾಯ ಇಲಾಖೆಯ ಗ್ರಾಮ ಸಹಾಯಕರ ಸಂಘದ ಅಧ್ಯಕ್ಷ ನೀಲಪ್ಪ ಬೇವಿನಮರದ ಇವರ ನೇತೃತ್ವದಲ್ಲಿ ಹೋರಾಟ ಮಾಡಲಾಗಿತ್ತು.

ಈ ವೇಳೆ ಕಂದಾಯ ನಿರೀಕ್ಷಕ ಎಂ.ಎ. ನದಾಫ್, ದೇವಪ್ಪ ದೇವರಮನಿ, ಶ್ರೀಕಾಂತ್ ನವಲೆ, ಮಲ್ಲಿಕ್‌ಸಾಬ್ ಪಿಂಜಾರ, ಅಲ್ಲಾಭಕ್ಷಿ ಮದಗಮಾಸೂರ, ಗ್ರಾಮಸೇವಕ ಕೃಷ್ಣಮೂರ್ತಿ ಮತ್ತು ವಾಲಿಕಾರ್ ಸಂಘದ ಪದಾಧಿಕಾರಿಗಳು, ಸದಸ್ಯರು, ಹುಲ್ಲೂರು ಗ್ರಾಮದ ಚನ್ನಪ್ಪ ಮಾಗಡಿ, ನಾಗಪ್ಪ ಮೂಕಿ, ನಬಿಸಾಬ್ ನದಾಫ್, ದೇವಪ್ಪ ಮಾಗಡಿ, ಅಬ್ದುಲ್‌ರಜಾಕ್ ಗಾಡಗೋಳಿ, ಸುರೇಶ ಮೇಟಿ, ಎಂ.ಎಂ. ಗಾಡಗೋಳಿ, ಕಬೀರ್‌ಸಾಬ್ ನದಾಫ್, ಭರಮಣ್ಣ ಹಳ್ಳಿಗೊರವರ, ಐ.ಸಿ. ಸಾಸಲವಾಡ, ಶಿವಯೋಗಿ ಮುದುಕಣ್ಣವರ, ದೇವಪ್ಪ ಮೂಕಿ, ಭಾಷಾಸಾಬ್ ನದಾಫ್, ಅಲ್ಲಿಸಾಬ್ ನದಾಫ್, ರಮೇಶ ಲಮಾಣಿ, ಸಿದ್ದಪ್ಪ ಹಡಗಲಿ ಇದ್ದರು.

## ಮಾಸಾಶನ ಮುಂದುವರಿಕೆಗೆ ಜೀವಿತ ಪ್ರಮಾಣ ಪತ್ರ ಸಲ್ಲಿಕೆ ಕಡ್ಡಾಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಾಸಾಶನ ಹಾಗೂ ವಿಧವಾ ಮಾಸಾಶನ ಪಡೆಯುತ್ತಿರುವ ಸಾಹಿತಿಗಳು ಮತ್ತು ಕಲಾವಿದರು ತಮ್ಮ ಮಾಸಾಶನ ಮುಂದುವರಿಕೆಗೆ 'ಜೀವಿತ ಪ್ರಮಾಣ ಪತ್ರ' (Life Certificate) ಸಲ್ಲಿಸುವಂತೆ ಇಲಾಖೆ ಪ್ರಕಟಣೆ ಹೊರಡಿಸಿದೆ.

ಬೆಂಗಳೂರು ನಿರ್ದೇಶಕರ ಸುತ್ತೋಲೆಯನ್ವಯ, ಮಾಸಾಶನ ಪಡೆಯುವವರು ಪ್ರತಿ ಆರು ತಿಂಗಳಿಗೊಮ್ಮೆ ಜೀವಿತ ಪ್ರಮಾಣ ಪತ್ರ ಸಲ್ಲಿಸುವುದು ಕಡ್ಡಾಯವಾಗಿದೆ. ಅದರಂತೆ ಗದಗ ಜಿಲ್ಲೆಯ ಫಲಾನುಭವಿಗಳು ನಿಗದಿತ ದಿನಾಂಕ 31.03.2026 ರೊಳಗಾಗಿ ತಮ್ಮ ಜೀವಿತ ಪ್ರಮಾಣ ಪತ್ರವನ್ನು ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೊಠಡಿ ಸಂಖ್ಯೆ: 103, ಜಿಲ್ಲಾಡಳಿತ ಭವನ, ಗದಗ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ: 08372–221864 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ಬಳ್ಳಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಅಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ಶ್ರೀ ಯೋಗಿನಾರಾಯಣ ಜಯಂತಿ ಕಾರ್ಯಕ್ರಮವನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ದುರಗೇಶ ಕೆ.ಆರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ರಾಜಕುಮಾರ ಎಸ್.ಸಂಕನೂರ, ಕಲಾವಿದರಾದ ಬಸವರಾಜ, ಈರಣ್ಣ, ಮಂಜುನಾಥ ಚಲವಾದಿ ಉಪಸ್ಥಿತರಿದ್ದರು.

## ಬಣ್ಣದಲ್ಲಿ ಮಿಂದೆದ್ದ ಯುವಕರು, ಚಿಣ್ಣರು



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಅಲ್ಲಿ ಸೇರಿದ್ದ ಎಲ್ಲರೂ ತಮ್ಮ ದುಃಖ-ದುಮ್ಮಾನಗಳನ್ನೆಲ್ಲ ಮರೆತು ಖುಷಿಯಿಂದ ಬಣ್ಣವಾಡುತ್ತಿದ್ದರು. ನಡುನಡುವೆ ಬಾಯಿ ಬಡಿದುಕೊಳ್ಳುತ್ತಿದ್ದರು. ಚಿಕ್ಕವರು, ದೊಡ್ಡವರು, ಮಹಿಳೆಯರು, ಪುರುಷರೆನ್ನದೆ ಎಲ್ಲರೂ ಪರಸ್ಪರ ಬಣ್ಣವನ್ನೆರಚಿ ಸಂತೋಷಿಸಿ ಹೋಳಿ ಹಬ್ಬವನ್ನು ಸಂಭ್ರಮದಿಂದ ಆಚರಿಸಿದ ದೃಶ್ಯ ನರೇಗಲ್ಲ ಹೋಬಳಿಯಾದ್ಯಂತ ಕಂಡು ಬಂದಿತು.

ಸ್ಥಳೀಯ ಎಲ್ಲ ಓಣಿಗಳಲ್ಲಿ ಮಂಗಳವಾರ ಸಂಜೆ ಕಾಮಣ್ಣನ ಮೂರ್ತಿ ಪ್ರತಿಷ್ಠಾಪಿಸಿ ಬೆಳಗಿನ ಜಾವ ಮೂರ್ತಿಗೆ ಅಗ್ನಿಸ್ಪರ್ಶ ಮಾಡಿ ದುರ್ಗುಣಗಳನ್ನು ದೂರವಾಡು ಎಂದು ಪ್ರಾರ್ಥಿಸಿದರು.

ಗುಂಪು ಗುಂಪಾಗಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಯುವಕರು, ಚಿಕ್ಕ ಮಕ್ಕಳು ಹಲಗೆ, ತಮಟೆ, ಬಡಿದು ಕುಣಿದು ಕುಪ್ಪಳಿಸಿದರು. ಚಿಕ್ಕ ಮಕ್ಕಳು ಪೀಚಕಾರಿಯಲ್ಲಿ ಬಣ್ಣದ ನೀರು ತುಂಬಿಸಿ ಅಕ್ಕಪಕ್ಕದ ಗೆಳೆಯರಿಗೆ ಎರಚುತ್ತ ಓಡಾಡುತ್ತಿದ್ದರು.

ಇನ್ನು ಕೆಲ ಯುವಕರು ಒಬ್ಬರಿಗೊಬ್ಬರು ಒಣ ಬಣ್ಣ ಹಚ್ಚಿ ಲಬೋ ಲಬೋ ಎಂದು ಹೊಯ್ಕೊಳ್ಳುತ್ತಿದ್ದುದು ಕಂಡು ಬಂದಿತು.

ಪಟ್ಟಣದ ಶ್ರೀ ಅನ್ನದಾನೇಶ್ವರ ಕಿವುಡ ಮತ್ತು ಮೂಕ ಶಾಲೆಯ ಮಕ್ಕಳು ಹೋಳಿ ಹಬ್ಬದ ನಿಮಿತ್ತ ಪರಸ್ಪರ ಬಣ್ಣ ಹಚ್ಚಿ ಸಂಭ್ರಮಿಸಿದರು. ಮನೆಗಳಲ್ಲಿ ಮಹಿಳೆಯರು ಬಣ್ಣವನ್ನಾಡಿ ಬಂದವರಿಗೆ ಹೋಳಿಗೆ ಊಟವನ್ನು ನೀಡಿ ಸಂಭ್ರಮಿಸಿದರು. ನರೇಗಲ್ಲ ಪಿಎಸ್‌ಐ ಐಶ್ವರ್ಯ ನಾಗರಾಳ ಮತ್ತು ಸಿಬ್ಬಂದಿಯವರು ಯಾವುದೇ ಅಹಿತಕರ ಘಟನೆ ಜರುಗದಂತೆ ಸೂಕ್ತ ಪೊಲೀಸ್ ಬಂದೋಬಸ್ತ್ ಕೈಗೊಂಡಿದ್ದರು.

## 5ಕೆ ಮ್ಯಾರಥಾನ್ ಪೂರ್ಣಗೊಳಿಸಿದ ಕೆ.ಎಸ್. ಪಲ್ಲೇದ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪೊಲೀಸ್ ಇಲಾಖೆ ಮತ್ತು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗದಗ ಶಾಖೆ ಇವರುಗಳ ಸಹಯೋಗದಲ್ಲಿ 'ಮಾದಕ ವಸ್ತು ಮುಕ್ತ ಕರ್ನಾಟಕ, ಎಲ್ಲರಿಗೂ ಆರೋಗ್ಯ ಮತ್ತು ನಮ್ಮ ಪೊಲೀಸ್ ನಮ್ಮ ಹೆಮ್ಮೆ' ಎಂಬ ಧ್ಯೇಯ ವಾಣಿಗಳನ್ನು ಜನತೆಯಲ್ಲಿ ಜಾಗೃತಗೊಳಿಸುವ ಉದ್ದೇಶದಿಂದ ಆಯೋಜಿಸಿದ್ದ ಕರ್ನಾಟಕ ಪೊಲೀಸ್ ರನ್–2026 ಸ್ಪರ್ಧೆಯಲ್ಲಿ ಬಸವ ಯೋಗ ಮಹಾವಿದ್ಯಾಲಯದ ಯೋಗಗುರು ಕೆ.ಎಸ್. ಪಲ್ಲೇದ ಭಾಗವಹಿಸಿ 5 ಕಿ.ಮೀ. ಅಂತರದ ಓಟವನ್ನು ಪೂರ್ಣಗೊಳಿಸಿದ್ದಕ್ಕಾಗಿ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಕೆ.ಎಸ್. ಪಲ್ಲೇದರನ್ನು ಅಭಿನಂದಿಸಿ ಗೌರವಿಸಿದರು.

ಸ್ಪರ್ಧೆಯಲ್ಲಿ ಭಾಗವಹಿಸಲು ಸಾರ್ವಜನಿಕರಿಗೆ, ಹಿರಿಯ ನಾಗರಿಕರಿಗೆ, ಕ್ರೀಡಾಪಟುಗಳಿಗೆ, ಇಲಾಖಾ ನೌಕರರಿಗೆ, ಮಾಧ್ಯಮ ಮಿತ್ರರಿಗೆ ಎಲ್ಲರಿಗೂ ಅವಕಾಶವಿತ್ತು.

ಸಂಘಟಕರು ಆಯೋಜಿರುವ ಕಾರ್ಯ ಯಶಸ್ಸಿಗೆ ಮತ್ತು ನಾನು ಮಾಡಿದ ಯೋಗ ಸಾಧನೆಯ ಪರೀಕ್ಷೆಗಾಗಿ ಭಾಗವಹಿಸಿದ್ದೇನೆ. ಆದ್ದರಿಂದ ನೀವೂ ಯೋಗ ಮಾಡಿ ದುಶ್ಚಟ, ದುರಭ್ಯಾಸಗಳಿಂದ ದೂರವಿದ್ದು, ಆರೋಗ್ಯವಂತರಾಗಿ ಎಂದು ಉತ್ತರಿಸಿರುವುದಾಗಿ ಕೆ.ಎಸ್. ಪಲ್ಲೇದ ತಿಳಿಸಿ, ಕಾರ್ಯಕ್ರಮದ ಸಂಘಟಕರಿಗೆ ಅಭಿನಂದನೆ ತಿಳಿಸಿದ್ದಾರೆ.

### ಮದುವೆ ವಿಚಾರವಾಗಿ ಫೆ. 28ರಂದು ನಡೆದಿದ್ದ ಕೊಲೆ

## 24 ಗಂಟೆಯಲ್ಲಿಯೇ ಆರೋಪಿಗಳ ಬಂಧನ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗದಗ-ಲಕ್ಷ್ಮೇಶ್ವರ ರಸ್ತೆ ಪಕ್ಕದ ಜಮೀನೊಂದರಲ್ಲಿ ತಾಲೂಕಿನ ಶಿಗ್ಲಿ ಗ್ರಾಮದ ನಿವಾಸಿ ಮಹಮ್ಮದ್‌ಫಾರೂಕ್ ಹುಸೇನ್‌ಸಾಬ್‌ಶೇಖ್ ಸನದಿ (29) ಎಂಬ ಯುವಕನನ್ನು ಫೆ. 28ರಂದು ಕೊಲೆ ಮಾಡಿ ಎಸೆಯಲಾಗಿತ್ತು.

ಘಟನೆ ನಡೆದ 24 ಗಂಟೆಗಳ ಒಳಗಾಗಿ ಕೊಲೆಗಾರರನ್ನು ಪತ್ತೆ ಹಚ್ಚುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಕೊಲೆಯಾದ ಮಹಮ್ಮದ್‌ಫಾರೂಕ್ ಕಾಣೆಯಾದ ಬಗ್ಗೆ ಅವರ ಕುಟುಂಬಸ್ಥರು ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು. ದೂರು ದಾಖಲಿಸಿಕೊಂಡಿದ್ದ ಪೊಲೀಸರು ಯುವಕನನ್ನು ಹುಡುಕಲು ಮುಂದಾದಾಗ ಆತನನ್ನು ಕೊಲೆ ಮಾಡಿ ಹೊಲದಲ್ಲಿ ಎಸೆದಿದ್ದು ತಿಳಿದುಬಂದಿತ್ತು.

ಸುದ್ದಿ ತಿಳಿಯುತ್ತಿದ್ದಂತೆ ಎಸ್.ಪಿ ರೋಹನ್ ಜಗದೀಶ, ಡಿವೈಎಸ್‌ಪಿ ಮುರ್ತುಜಾ ಖಾದ್ರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಅವರ ಮಾರ್ಗದರ್ಶನದ ಮೇರೆಗೆ ಸಿಪಿಐ ಬಿ.ವಿ. ನ್ಯಾಮಗೌಡ್ರ ಅವರ ನೇತೃತ್ವದಲ್ಲಿ ಪಿಎಸ್‌ಐ ನಾಗರಾಜ ಗಡದ, ಹಾಗು ಸಿಬ್ಬಂದಿಗಳ ತಂಡ ಆರೋಪಿತರ ಪತ್ತೆಗಾಗಿ ಬಲೆ ಬೀಸಿ 24 ಗಂಟೆಯಲ್ಲಿಯೇ ಆರೋಪಿಗಳನ್ನು ಬಂಧಿಸಿದ್ದಾರೆ.

ಪೊಲೀಸರು ತೀವ್ರ ತನಿಖೆ ನಡೆಸಿ, ಆರೋಪಿತರಾದ ದಾವಲಸಾಬ ಪಾಪಾಸಾಬ್ ಮಕಾನದಾರ (22), ಮುಕ್ತುಂಹುಸೇನ್ ಹುಸೇನಸಾಬ ತಹಸೀಲ್ದಾರ (23), ಅಜಯಕುಮಾರ ಮಂಜುನಾಥ ಬಿಳೆಬಾಳ (18) ಹಾಗೂ ಮಹ್ಮದ್‌ಹುಸೇನ್ ದಸ್ತಗೀರಸಾಬ್ ಸಂಗಟಿ (16) ಎಂಬುವರನ್ನು ಬಂಧಿಸಿದ್ದಾರೆ. ಇವರೆಲ್ಲರೂ ಧಾರವಾಡ ಜಿಲ್ಲೆ ನವಲಗುಂದ ತಾಲೂಕು ಅಣ್ಣಿಗೇರಿ ಗ್ರಾಮದ ಯುವಕರಾಗಿದ್ದಾರೆ.



ಕೊಲೆಗಾರರ ಪೈಕಿ ಆರೋಪಿ ದಾವಲಸಾಬ ಮಕಾನದಾರ ಈತನಿಗೆ ಕುಂದಗೋಳ ತಾಲೂಕು ತರ್ಲಘಟ್ಟದ ಗ್ರಾಮದ ಯುವತಿಯ ಪರಿಚಯವಾಗಿ ಅವಳನ್ನು ಪ್ರೀತಿಸುತ್ತಿದ್ದ. ಅಲ್ಲದೆ ಅವಳನ್ನು ಮದುವೆಯಾಗಲು ನಿರ್ಧರಿಸಿದ್ದ.

ಆದರೆ ಯುವತಿಯ ಮನೆಯವರು ಲಕ್ಷ್ಮೇಶ್ವರ ಕೊಲೆಗೀಡಾದ ಮಹಮದ್ ಫಾರೂಕ್ ಶೇಖ್‌ಸನದಿಯೊಂದಿಗೆ ಒಂದು ತಿಂಗಳ ಹಿಂದೆ ಮದುವೆ ನಿಶ್ಚಯ ಮಾಡಿದ್ದರು. ಈ ಸುದ್ದಿ ತಿಳಿದ ದಾವಲಸಾಬ ಉಳಿದ ಮೂವರು ಆರೋಪಿಗಳೊಂದಿಗೆ ಅಣ್ಣಿಗೇರಿಯಿಂದ ಕಾರಿನಲ್ಲಿ ಲಕ್ಷ್ಮೇಶ್ವರಕ್ಕೆ ಬಂದು ಊರ ಹೊರವಲಯಕ್ಕೆ ಕರೆದುಕೊಂಡು ಹೋಗಿ ಕೊಡಲಿ ಹಾಗೂ ಚಾಕುವಿನಿಂದ ಹೊಡೆದು ಕೊಲೆ ಮಾಡಿ ಬಿಸಾಕಿ ಹೋಗಿದ್ದರು.

ಸದರಿ ಪ್ರಕರಣ ಬೇಧಿಸುವಲ್ಲಿ ಯಶಸ್ವಿಯಾದ ಸಿಪಿಐ ಬಿ.ವಿ. ನ್ಯಾಮಗೌಡ್ರ, ಪಿಎಸ್‌ಐ ನಾಗರಾಜ ಗಡದ, ಕ್ರೈಂ ಪಿಎಸ್‌ಐ ಟಿ.ಕೆ. ರಾಥೋಡ ಹಾಗೂ ಸಿಬ್ಬಂದಿಗಳಾದ ಆರ್.ಎಸ್. ಯರಗಟ್ಟಿ, ಎಂ.ಎ. ಶೇಖ್, ಎ.ಆರ್. ಕಮ್ಮಾರ, ಎಂ.ಎಸ್. ಬಳ್ಳಾರಿ, ಡಿ.ಎಸ್. ನದಾಫ್, ಪಾಂಡುರಂಗರಾವ್, ಮಧುಚಂದ್ರ ಧಾರವಾಡ, ಎಂ.ವೈ. ಉಪ್ಪಾರ, ಬಸವರಾಜ ಮುಳಗುಂದ, ಸೋಮು ವಾಲ್ಮೀಕಿ, ಕೃಷ್ಣ ಹುಲಗೂರ, ಅಪ್ಪಣ್ಣ ರಾಥೋಡ, ಗದಗ ಜಿಲ್ಲೆ ತಾಂತ್ರಿಕ ವಿಭಾಗದ ಗುರು ಬೂದಿನಾಳ, ಸಚಿಜು ಕೊರಡೂರ ಅವರಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka